# ಜಿಲ್ಲಾ ಪಂಚಾಯಿತಿ, ಹಾಸನ.

ಸಂಖ್ಯೆ: ಜಿಪಂಹಾ/ಪ.ಶಾ/44 /2011-12

ದಿನಾಂಕ: 31-10-2011

## ಸಭಾಹ್ವಾನ ಪತ್ರ

ದಿನಾಂಕ: **11-11-2011**ರಂದು ಶುಕ್ರವಾರ ಅಪರಾಹ್ನ:**12-30** ಗಂಟೆಗೆ ಶ್ರೀಮತಿ ಸುಲೋಚನಾ ರಾಮಕೃಷ್ಣ, ಮಾನ್ಯ ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ, ಹಾಸನ ಇವರ ಅಧ್ಯಕ್ಷತೆಯಲ್ಲಿ ಜಿಲ್ಲಾ ಪಂಚಾಯತ್ ಸಾಮಾನ್ಯ ಸಭೆಯನ್ನು ಹೊಯ್ಸಳ ಸಭಾಂಗಣದಲ್ಲಿ ಕರೆಯಲಾಗಿದೆ. ಮಾನ್ಯ ಸದಸ್ಯರುಗಳು ಸಭೆಗೆ ಸಕಾಲದಲ್ಲಿ ಹಾಜರಾಗಲು ಕೋರಿದೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ,
ಜಿಲ್ಲಾ ಪಂಚಾಯಿತಿ, ಹಾಸನ.

**ಸಭೆಯಲ್ಲಿ ಚರ್ಚಿಸಬೇಕಾದ ವಿಷಯಗಳು:**

1. ದಿನಾಂಕ: 26-08-2011ರಂದು ನಡೆದ ಸಾಮಾನ್ಯ ಸಭೆಯ ನಡವಳಿಗಳನ್ನು ಅಂಗೀಕರಿಸುವ ವಿಚಾರ
2. ದಿನಾಂಕ: 21-09-2011ರಂದು ನಡೆದ ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ವಿಚಾರ
3. ದಿನಾಂಕ: 24-09-2011ರಂದು ನಡೆದ ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ವಿಚಾರ
4. ದಿನಾಂಕ: 29-09-2011ರಂದು ನಡೆದ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ವಿಚಾರ
5. ಕುಡಿಯುವ ನೀರಿನ ಬಗ್ಗೆ.
6. ರಸ್ತೆ ಸಂಪರ್ಕ ಬಗ್ಗೆ.
7. ಬರಪರಿಹಾರ ಕಾಮಗಾರಿಗಳ ಬಗ್ಗೆ.

**ಅಧ್ಯಕ್ಷರ ಅಪ್ಪಣೆ ಮೇರೆಗೆ ವಿಷಯಗಳು**

ಪ್ರತಿಯನ್ನು:

1. ಮಾನ್ಯ ವಸತಿ ಸಚಿವರು ಹಾಗೂ ಹಾಸನ ಜಿಲ್ಲಾ ಉಸ್ತುವಾರಿ ಸಚಿವರ ಆಪ್ತಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ಬೆಂಗಳೂರು ಇವರಿಗೆ ಕಳುಹಿಸುತ್ತಾ, ವಿಷಯವನ್ನು ಮಾನ್ಯ ಸಚಿವರ ಗಮನಕ್ಕೆ ತರಲು ಕೋರಿದೆ.
2. ಮಾನ್ಯ ಸರ್ಕಾರದ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ದಯಾಪರ ಅವಗಾಹನೆಗೆ ಸಲ್ಲಿಸಿದೆ.
3. ಮಾನ್ಯ ಲೋಕಸಭಾ ಸದಸ್ಯರು,ಹಾಸನ ಜಿಲ್ಲೆ, ಹಾಸನ ಇವರಿಗೆ ದಯಾಪರ ಅವಗಾಹನೆಗೆ ಸಲ್ಲಿಸಿದೆ.
4. ಹಾಸನ ಜಿಲ್ಲೆಯ ಎಲ್ಲಾ ಮಾನ್ಯ ವಿಧಾನ ಸಭಾ ಮತ್ತು ವಿಧಾನ ಪರಿಷತ್ ಸದಸ್ಯರುಗಳಿಗೆ ಮಾಹಿತಿಗಾಗಿ ಸಲ್ಲಿಸಿದೆ

5. ಹಾಸನ ಜಿಲ್ಲಾ ಪಂಚಾಯತ್, ಮಾನ್ಯ ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಆಪ್ತಶಾಖೆಗೆ ಮಾಹಿತಿಗಾಗಿ ಸಲ್ಲಿಸಿದೆ.
6. ಹಾಸನ ಜಿಲ್ಲೆಯ ಎಲ್ಲಾ ಮಾನ್ಯ ಜಿಲ್ಲಾ ಪಂಚಾಯಿತಿ ಸದಸ್ಯರುಗಳಿಗೆ ಸಭೆಗೆ ಹಾಜರಾಗಲು ಕೋರಿದೆ.
7. ಹಾಸನ ಜಿಲ್ಲೆಯ ಎಲ್ಲಾ ತಾಲ್ಲೂಕು ಪಂಚಾಯಿತಿ ಅಧ್ಯಕ್ಷರುಗಳಿಗೆ
8. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ಆಪ್ತಶಾಖೆ, ಜಿಲ್ಲಾ ಪಂಚಾಯಿತಿ, ಹಾಸನ.
9. ಉಪ ಕಾರ್ಯದರ್ಶಿ( ಆಡಳಿತ), ಜಿಲ್ಲಾ ಪಂಚಾಯಿತಿ, ಹಾಸನ.
10. ಉಪ ಕಾರ್ಯದರ್ಶಿ(ಅಭಿವೃದ್ಧಿ), ಜಿಲ್ಲಾ ಪಂಚಾಯಿತಿ, ಹಾಸನ.
11. ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ.
12. ಮುಖ್ಯ ಯೋಜನಾಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ.
13. ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ
14. ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ (ಗ್ರಾಮೀಣ ನೀರು ಸರಬರಾಜು ವಿಭಾಗ)ಮತ್ತು ಚನ್ನರಾಯಪಟ್ಟಣ(ಸಾಮಾನ್ಯ ವಿಭಾಗ)
15. ಉಪ ನಿರ್ದೇಶಕರು, ಕರ್ನಾಟಕ ಮೂಲ ಸೌಕರ್ಯಗಳ ಇಲಾಖೆ
16. ಕಛೇರಿ ಪ್ರತಿ.

# ದಿನಾಂಕ: 11-11-2011ರಂದು ಅಪರಾಹ್ನ:12-30 ಗಂಟೆಗೆ ಹೊಯ್ಸಳ ಸಭಾಂಗಣ, ಜಿಲ್ಲಾ ಪಂಚಾಯತ್, ಹಾಸನ ಇಲ್ಲಿ ನಡೆದ ಜಿಲ್ಲಾ ಪಂಚಾಯತ್ ಸಾಮಾನ್ಯ ಸಭೆಯ ನಡವಳಿಗಳು

**ಅಧ್ಯಕ್ಷತೆ: ಶ್ರೀಮತಿ ಸುಲೋಚನಾ ರಾಮಕೃಷ್ಣ**

**ಆಧ್ಯಕ್ಷರು,**

**ಜಿಲ್ಲಾ ಪಂಚಾಯತ್, ಹಾಸನ.**

ಹಾಜರಿ: 40

ಗೈರು ಹಾಜರಿ:18

| ಸಂ | ವಿಷಯ | ಚರ್ಚೆ | ತೀರ್ಮಾನ |
|---|---|---|---|
| | | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಸಭೆಗೆ ಮಾನ್ಯ ಅಧ್ಯಕ್ಷರು, ಮಾನ್ಯ ಉಪಾಧ್ಯಕ್ಷರು, ಮಾನ್ಯ ಜಿಲ್ಲಾ ಪಂಚಾಯಿತಿ ಸದಸ್ಯರು, ತಾಲ್ಲೂಕು ಪಂಚಾಯಿತಿ ಅಧ್ಯಕ್ಷರು, ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಪತ್ರಿಕಾ ಮಾಧ್ಯಮದವರನ್ನು ಸ್ವಾಗತಿಸುತ್ತಾ, ಅಧ್ಯಕ್ಷತೆ ವಹಿಸಿ ಸಭೆಯನ್ನು ನಡೆಸಿಕೊಡುವಂತೆ ಮಾನ್ಯ ಅಧ್ಯಕ್ಷರನ್ನು ಕೋರಿದರು. | |
| | | ಜಿಲ್ಲಾ ಪಂಚಾಯತ್, ಹಾಸನ ಇಲ್ಲಿ ಮುಖ್ಯ ಲೆಕ್ಕಾಧಿಕಾರಿಯಾಗಿ ಕೆಲಸ ನಿರ್ವಹಿಸುತ್ತಿದ್ದ ಶ್ರೀ ನಂಜಯ್ಯರವರು ದಿನಾಂಕ. 04-11-2011ರಂದು ನಿಧನಹೊಂದಿದ ಪ್ರಯುಕ್ತ ಸಭೆಯಲ್ಲಿ ಅವರ ಆತ್ಮಕ್ಕೆ ಶಾಂತಿ ಕೋರಿ 2 ನಿಮಿಷಗಳ ಮೌನಾಚರಣೆಯನ್ನು ಮಾಡಲಾಯಿತು.<br>ಶ್ರೀ ಎಸ್.ಟಿ.ಅಂಜನ್ ಕುಮಾರ್, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರಿಗೆ ಕರ್ನಾಟಕ ಆಡಳಿತ ಸೇವೆಯಿಂದ ಭಾರತೀಯ ಆಡಳಿತ ಸೇವೆಗೆ ಮುಂಬಡ್ತಿ ದೊರೆತಿದ್ದಕ್ಕೆ ಅಭಿನಂದನೆಯನ್ನು ಸಲ್ಲಿಸಲಾಯಿತು. | |
| | ದಿನಾಂಕ: 26-08-211ರಂದು ನಡೆದ ಸಾಮಾನ್ಯ ಸಭೆಯ ನಡವಳಿಗಳನ್ನು ಅಂಗೀಕರಿಸುವ ಕುರಿತು. | ದಿನಾಂಕ: 26-08-2011ರಂದು ನಡೆದ ಜಿಲ್ಲಾ ಪಂಚಾಯತ್ ಸಾಮಾನ್ಯ ಸಭೆಯ ನಡವಳಿಗಳನ್ನು ಅಂಗೀಕರಿಸುವಂತೆ ಮಾನ್ಯ ಅಧ್ಯಕ್ಷರಾದ ಶ್ರೀಮತಿ ಸುಲೋಚನಾ ರಾಮಕೃಷ್ಣರವರು ಸಭೆಯನ್ನು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀಮತಿ ಜ್ಯೋತಿ ಗುರುದೇವ್ ರವರು ಮಾತನಾಡುತ್ತಾ, ಸಾಮಾನ್ಯ ಸಭೆಯನ್ನು ನಡೆಸುವ 10 ದಿನಗಳ ಮುಂಚಿತವಾಗಿ ಸಭೆಯ ವಿಷಯಸೂಚಿಯನ್ನು ಕಳುಹಿಸುವುದು ವಾಡಿಕೆ. ಆದರೆ, ಈ ಸಭೆಗೆ ಕೇವಲ 2 ದಿನಗಳ ಮುಂಚಿತವಾಗಿ ಸಭೆಯ ವಿಷಯಸೂಚಿಯನ್ನು ಕಳುಹಿಸಿರುವ ಬಗ್ಗೆ ತಮ್ಮ ಆಕ್ಷೇಪವನ್ನು ವ್ಯಕ್ತಪಡಿಸುತ್ತಾ, ಹಿಂದೆ ನಡೆದಿರುವ ಸ್ಥಾಯಿ ಸಮಿತಿಗಳಲ್ಲಿ ಮಂಡಿಸಿರುವ ವಿಷಯಗಳನ್ನು ಓದುವುದಕ್ಕೂ ಸಹ ಸಮಯ ಸಿಕ್ಕಿರುವುದಿಲ್ಲ. ಆದ್ದರಿಂದ, ಈ ದಿನದ ಸಭೆಯನ್ನು ಮುಂದೂಡಬೇಕೆಂದು ಕೋರಿದರು. | ಸಭೆಯಲ್ಲಿ ಸಮಗ್ರವಾಗಿ ಚರ್ಚಿಸಿದ ನಂತರ ದಿನಾಂಕ: 26-08-2011 ರಂದು ನಡೆದ ಸಾಮಾನ್ಯ ಸ[illegible]ಯ ನಡವಳಿಗಳನ್ನು ಸಭೆಯು ಸರ್ವಾನು ಮತದಿಂದ ಅಂಗೀಕರಿಸಿತು. |

ಶೆಟ್ಟಿ ಮತ್ತು ಶ್ರೀಮತಿ ಜಯಶೀಲ ಜಯಶಂಕರ್ ರವರು ತಮ್ಮ ಸಹಮತವನ್ನು ವ್ಯಕ್ತಪಡಿಸಿದರು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರು ಜಿಲ್ಲೆಗೆ ಆಗಮಿಸಿದ ಸಂದರ್ಭದಲ್ಲಿ ಜಿಲ್ಲೆಯಲ್ಲಿ ಉಂಟಾಗಿರುವ ಬರಗಾಲ ಪರಿಸ್ಥಿತಿಯ ಬಗ್ಗೆ ಏನೇನು ಕ್ರಮ ತೆಗೆದುಕೊಳ್ಳಬೇಕು ಎಂಬ ಬಗ್ಗೆ ಜಿಲ್ಲಾ ಪಂಚಾಯಿತಿ ಸದಸ್ಯರೊಂದಿಗೆ ಚರ್ಚೆ ನಡೆಸುವಂತೆ ತಿಳಿಸಿರುತ್ತಾರೆ ಹಾಗೂ ಮಾನ್ಯ ಜಿಲ್ಲಾಧಿಕಾರಿಯವರೂ ಸಹ ಬರಪರಿಹಾರ ಕಾಮಗಾರಿಗಳ ಬಗ್ಗೆ ಜಿಲ್ಲಾ ಪಂಚಾಯಿತಿ ಸದಸ್ಯರೊಂದಿಗೆ ಚರ್ಚಿಸುವುದು ಸೂಕ್ತವೆಂದು ಅಭಿಪ್ರಾಯಪಟ್ಟ ಹಿನ್ನಲೆಯಲ್ಲಿ ತುರ್ತಾಗಿ ಸಾಮಾನ್ಯ ಸಭೆಯನ್ನು ಕರೆಯಲಾಗಿದೆ ಎಂದು ವಿವರ ನೀಡಿದರು.

ಮುಂದುವರೆದು, ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರೊಂದಿಗೆ ರಸ್ತೆ ಅಭಿವೃದ್ಧಿ ಬಗ್ಗೆ ಚರ್ಚೆ ನಡೆಸಲಾಗಿದೆ. ಜಿಲ್ಲೆಯ ರಸ್ತೆಗಳ ಅಭಿವೃದ್ಧಿ ಬಗ್ಗೆ ಸಮಗ್ರವಾಗಿ ವರದಿ ಸಲ್ಲಿಸಬೇಕಾಗಿದೆ ಹಾಗೂ ಮೇಲ್ದರ್ಜೆಗೇರಿಸಬೇಕಾದಂತಹ ರಸ್ತೆಗಳ ಪ್ರಸ್ತಾವನೆಯನ್ನೂ ಸಹ ಸರ್ಕಾರಕ್ಕೆ ಸಲ್ಲಿಸಬೇಕಾಗಿರುತ್ತದೆ ಎಂದು ತಿಳಿಸಿದರು.

ಮಾನ್ಯ ಸದಸ್ಯರಾದ ಶ್ರೀ ಈಶ್ವರಹಳ್ಳಿ ಲಕ್ಷ್ಮಣ್ ರವರು ಮಾತನಾಡುತ್ತಾ, ಜಾವಗಲ್ ಕ್ಷೇತ್ರಕ್ಕೆ ಸಂಬಂಧಿಸಿದಂತೆ, ರಸ್ತೆಗಳನ್ನು ಮೇಲ್ದರ್ಜೆಗೇರಿಸಲು ಈಗಾಗಲೇ ಕಾಮಗಾರಿಗಳ ಪಟ್ಟಿಯನ್ನು ಜಿಲ್ಲಾ ಪಂಚಾಯಿತಿಗೆ ಸಲ್ಲಿಸಲಾಗಿದ್ದರೂ ಸಹ ಇಲ್ಲಿಯವರೆಗೆ ಯಾವುದೇ ಕ್ರಮ ವಹಿಸದೇ ಇರುವ ಬಗ್ಗೆ ತಮ್ಮ ಆಕ್ಷೇಪವನ್ನು ವ್ಯಕ್ತಪಡಿಸಿದರು.

ಮಾನ್ಯ ಸದಸ್ಯರಾದ ಶ್ರೀ ಕೃಷ್ಣನಾಯ್ಕರವರು ಮಾತನಾಡುತ್ತಾ, ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಹೆಚ್ಚಾಗಿದ್ದು, ಕುಡಿಯುವ ನೀರಿನ ಸಮಸ್ಯೆ ಪರಿಹರಿಸುವ ನಿಟ್ಟಿನಲ್ಲಿ ಅಗತ್ಯ ಕ್ರಮ ವಹಿಸಬೇಕೆಂದು ಕೋರಿದರು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಕುಡಿಯುವ ನೀರಿನ ಯೋಜನೆಗೆ ಸಂಬಂಧಿಸಿದಂತೆ, ಯಾವುದೇ ಯೋಜನೆಯಡಿಯಲ್ಲಿ ಕೊಳವೆ ಬಾವಿಗಳನ್ನು ಕೊರೆಯುವುದಕ್ಕೆ ಅನುದಾನವನ್ನು ನೀಡುತ್ತಿಲ್ಲ. ಉಳಿದ ಕಾಮಗಾರಿಗಳಾದ ಪೈಪ್ ಲೈನ್ ವಿಸ್ತರಣೆ, ಡೀಪನಿಂಗ್, ರೀಫ್ರೆಷಿಂಗ್ ಇವೇ ಮೊದಲಾದ ಕಾಮಗಾರಿಗಳಿಗೆ ಸಂಬಂಧಿಸಿದಂತೆ, ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ ಹಾಗೂ ಜಿಲ್ಲಾಧಿಕಾರಿಯವರ ಬರಪರಿಹಾರ ನಿಧಿಯಡಿಯಲ್ಲಿಯೂ ಸಹ ಕುಡಿಯುವ ನೀರಿನ ಯೋಜನೆಗಳನ್ನು ಅನುಷ್ಠಾನ ಮಾಡುವ ಬಗ್ಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. ಈ ಎರಡೂ ಪ್ರಸ್ತಾವನೆಗಳಲ್ಲಿ ಜಿಲ್ಲಾ ಪಂಚಾಯಿತಿ ಸದಸ್ಯರು ನೀಡಿರುವ ಎಲ್ಲಾ ಕುಡಿಯುವ ನೀರಿನ ಕಾಮಗಾರಿಗಳನ್ನು ಸೇರಿಸಲಾಗಿದೆ . ಬರಗಾಲ ಪೀಡಿತ ತಾಲ್ಲೂಕುಗಳಿಗೆ ಹೆಚ್ಚಿನ ಆದ್ಯತೆ ನೀಡಿ ಕುಡಿಯುವ ನೀರಿನ ಯೋಜನೆಗಳನ್ನು ಸೇರಿಸಲಾಗಿದೆ. ಆದ್ದರಿಂದ, ಜಿಲ್ಲಾ ಪಂಚಾಯಿತಿ ಸದಸ್ಯರುಗಳು ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರ ಗಮನಕ್ಕೆ ತಂದು ಕುಡಿಯುವ ನೀರಿನ ಕ್ರಿಯಾ ಯೋಜನೆಗೆ ಅನುಮೋದನೆ ಪಡೆಯುವ ಬಗ್ಗೆ ಒತ್ತಡ ಹೇರಬೇಕೆಂದು ಕೋರಿದರು.

| | | | |
|---|---|---|---|
| | | ಮುಂದುವರೆದು, ಜಿಲ್ಲೆಯಲ್ಲಿ ಮೇಲ್ದರ್ಜೆಗೇರಿಸಬೇಕಾದಂತಹ ರಸ್ತೆಗಳ ಪಟ್ಟಿಗಳನ್ನು ಜಿಲ್ಲಾ ಪಂಚಾಯಿತಿ ಸದಸ್ಯರಿಂದ ಪಡೆದು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಕ್ರಮ ವಹಿಸಲಾಗುವುದೆಂದು ತಿಳಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಅಮಿತ್ ಕುಮಾರ್ ಶೆಟ್ಟಿರವರು ಮಾತನಾಡುತ್ತಾ, ಮಲೆನಾಡು ಪ್ರದೇಶಗಳಲ್ಲಿ ಹೆಚ್ಚಿಗೆ ಮಳೆ ಬಿದ್ದಿದ್ದರೂ ಸಹ ಅಲ್ಲಿ ಕೊಳವೆ ಬಾವಿಗಳು ಹೆಚ್ಚಾಗಿ ವಿಫಲವಾಗುವುದರಿಂದ, ಕುಡಿಯುವ ನೀರಿನ ಸಮಸ್ಯೆ ಬಹಳ ಇರುತ್ತದೆ. ಆದ್ದರಿಂದ, ಮಲೆನಾಡು ಪ್ರದೇಶಗಳನ್ನು ಕಡೆಗಣಿಸದೆ ಹೆಚ್ಚಿನ ಪ್ರಮಾಣದಲ್ಲಿ ಕುಡಿಯುವ ನೀರಿನ ಯೋಜನೆಗಳನ್ನು ಕೈಗೆತ್ತಿಕೊಳ್ಳಬೇಕೆಂದು ಕೋರಿದರು. | |
| | ದಿನಾಂಕ: 21-09-2011ರಂದು ನಡೆದ ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ಬಗ್ಗೆ | ದಿನಾಂಕ: 21-09-2011ರಂದು ನಡೆದ ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಮಾನ್ಯ ಮಾಜಿ ಅಧ್ಯಕ್ಷರಾದ ಶ್ರೀ ಬಿ.ಡಿ.ಚಂದ್ರೇಗೌಡರವರು ಸಭೆಗೆ ಮಂಡಿಸಿದರು. ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್ ರವರು ಸಭಾ ನಡವಳಿಗಳನ್ನು ಅನುಮೋದಿಸಿದರು. | ಸಮಗ್ರ ಚರ್ಚೆಯ ನಂತರ ದಿ: 21-09-11 ರಂದು ನಡೆದ ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಸಭೆಯಲ್ಲಿ ಸರ್ವಾನುಮತದಿಂದ ಅನುಮೋದಿಸಲಾಯಿತು. |
| | ದಿನಾಂಕ: 24-09-2011ರಂದು ನಡೆದ ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ಬಗ್ಗೆ | ದಿನಾಂಕ: 24-09-2011ರಂದು ನಡೆದ ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಮಾನ್ಯ ಸದಸ್ಯರಾದ ಶ್ರೀಮತಿ ಎಂ.ವಿ.ಹೇಮಾವತಿ ಮಂಜುನಾಥ್ ರವರು ಸಭೆಗೆ ಮಂಡಿಸಿದರು. ಮಾನ್ಯ ಸದಸ್ಯರಾದ ಶ್ರೀ ಸ್ವಾಮಿಗೌಡರವರು ಅನುಮೋದಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಅಮಿತ್ ಕುಮಾರ್ ಶೆಟ್ಟಿರವರು ಮಾತನಾಡುತ್ತಾ, ಬೇಲೂರು ತಾ: ನಾರ್ವೆ ಗ್ರಾಮದಲ್ಲಿ ಹೆಸರಿಗೆ ಮಾತ್ರ ಆಯುಷ್ ಆಸ್ಪತ್ರೆಯಿದೆ, ಆದರೆ, ಅಲ್ಲಿ ಯಾರೂ ವೈದ್ಯರು ಇರುವುದಿಲ್ಲ. ವೈದ್ಯರನ್ನು ನೇಮಕ ಮಾಡಲು ಕ್ರಮ ವಹಿಸಬೇಕೆಂದು ಕೋರಿದರು.<br>ಜಿಲ್ಲಾ ಆಯುಷ್ ವೈದ್ಯಾಧಿಕಾರಿಯವರು ಉತ್ತರಿಸುತ್ತಾ, ನಾರ್ವೆಯಲ್ಲಿ ಕೆಲಸ ನಿರ್ವಹಿಸುತ್ತಿದ್ದ ವೈದ್ಯರು ವರ್ಗಾವಣೆಗೊಂಡಿರುವುದರಿಂದ, ಬೇರೆ ಆಸ್ಪತ್ರೆಯಿಂದ ವಾರದಲ್ಲಿ 3 ಬಾರಿ ನಾರ್ವೆ ಆಸ್ಪತ್ರೆಯಲ್ಲಿ ಕೆಲಸ ನಿರ್ವಹಿಸಲು ನಿಯೋಜನೆ ಮಾಡಲಾಗಿದೆ ಎಂದು ವಿವರ ನೀಡಿದರು.<br>ಮಾನ್ಯ ಸದಸ್ಯರಾದ ಶ್ರೀಮತಿ ಕುಸುಮ ಬಾಲಕೃಷ್ಣರವರು ಮಾತನಾಡುತ್ತಾ, ನುಗ್ಗೇಹಳ್ಳಿ ಸಮುದಾಯ ಆಸ್ಪತ್ರೆಗೆ ಮಹಿಳಾ ವೈದ್ಯರು ಮತ್ತು ಆಂಬುಲೆನ್ಸ್ ವ್ಯವಸ್ಥೆಯಿಲ್ಲದೆ ಬಹಳ ಸಮಸ್ಯೆಯಾಗಿರುತ್ತದೆ. ಈ ಬಗ್ಗೆ ಅಗತ್ಯ ಕ್ರಮ ವಹಿಸಬೇಕೆಂದು ಕೋರಿದರು. | ಸಮಗ್ರ ಚರ್ಚೆಯ ನಂತರ, ಹಾಸನ ಜಿಲ್ಲೆಯ ಗ್ರಾಮೀಣ ಪ್ರದೇಶದ ಬಡ ಜನರಿಗೆ ಅನುಕೂಲವಾಗುವಂತೆ ಜಿಲ್ಲಾ ಆಸ್ಪತ್ರೆಗೆ ಸಿಟಿ ಸ್ಕ್ಯಾನರ್ ಖರೀದಿಸಿ ಅಳವಡಿಸುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು.<br>ಹಾಗೂ ದಿ:24-09-11 ರಂದು ನಡೆದ ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಸಭೆಯಲ್ಲಿ ಸರ್ವಾನುಮತದಿಂದ ಅನುಮೋದಿಸಲಾಯಿತು. |

ಮಾನ್ಯ ಸದಸ್ಯರಾದ ಶ್ರೀಮತಿ ಜ್ಯೋತಿ ಗುರುದೇವ್ ರವರು ಮಾತನಾಡುತ್ತಾ, ಸಕಲೇಶಪುರ ಪಟ್ಟಣದಲ್ಲಿರುವ ತಾಲ್ಲೂಕು ಆಸ್ಪತ್ರೆಯಲ್ಲಿ ಹೆರಿಗೆಗೆಂದು ಬಂದ ಮಹಿಳೆಯೊಬ್ಬರು ಸಾವನ್ನಪ್ಪಿರುತ್ತಾರೆ. ಆಸ್ಪತ್ರೆಯಲ್ಲಿ ವೈದ್ಯರಿಲ್ಲದೆ ಬಹಳ ಸಮಸ್ಯೆಯಾಗಿರುತ್ತದೆ. ಆದ್ದರಿಂದ, ವೈದ್ಯರನ್ನು ನೇಮಕ ಮಾಡಲು ಕ್ರಮ ವಹಿಸಬೇಕೆಂದು ಕೋರಿದರು.

ಮಾನ್ಯ ಸದಸ್ಯರಾದ ಶ್ರೀಮತಿ ಪಾರ್ವತಮ್ಮರವರು ಮಾತನಾಡುತ್ತಾ, ದೊಡ್ಡಮೇಟಿಕುರ್ಕೆ ಆಸ್ಪತ್ರೆಯಲ್ಲಿ ವೈದ್ಯರಿಲ್ಲದೆ ಸಾರ್ವಜನಿಕರಿಗೆ ಬಹಳ ತೊಂದರೆಯಾಗಿರುತ್ತದೆ. ಅಲ್ಲದೆ, ಸರ್ಕಾರಿ ಆಸ್ಪತ್ರೆಗಳಲ್ಲಿನ ವೈದ್ಯರು ರೋಗಿಗಳಿಗೆ ಹೊರಗೆ ಔಷಧಿಗಳನ್ನು ತೆಗೆದುಕೊಳ್ಳುವಂತೆ ಚೀಟಿಗಳನ್ನು ಬರೆದುಕೊಡುತ್ತಿದ್ದಾರೆ. ಈ ಬಗ್ಗೆ ಅಗತ್ಯ ಕ್ರಮ ವಹಿಸಬೇಕೆಂದು ಕೋರಿದರು.

ಮಾನ್ಯ ಸದಸ್ಯರಾದ ಶ್ರೀ ಹುಚ್ಚೇಗೌಡರವರು ಮಾತನಾಡುತ್ತಾ, ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರು ರೋಗಿಗಳಿಗೆ ಹೊರಗೆ ಔಷಧಿಗಳನ್ನು ತೆಗೆದುಕೊಳ್ಳುವಂತೆ ಚೀಟಿಗಳನ್ನು ನೀಡುವ ಔಷಧಿ ಚೀಟಿಗಳನ್ನು ತಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಯವರಿಗೆ ನೀಡಿದಲ್ಲಿ ಅದನ್ನು ಅವರು ಪರಿಶೀಲಿಸಿ ವೈದ್ಯರು ಆಸ್ಪತ್ರೆಯಲ್ಲಿ ಲಭ್ಯವಿರುವ ಔಷಧಿಗೋ ಅಥವಾ ಆಸ್ಪತ್ರೆಯಲ್ಲಿ ಲಭ್ಯವಿಲ್ಲದಿರುವ ಔಷಧಿಗೋ ಎಂಬ ಬಗ್ಗೆ ಪರಿಶೀಲಿಸಿ ಕ್ರಮ ವಹಿಸಲು ಅನುಕೂಲವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಮುಂದುವರೆದು, ಜಿಲ್ಲೆಯಲ್ಲಿ ಆರೋಗ್ಯ ಇಲಾಖೆಯಲ್ಲಿ ವೈದ್ಯರು, ಎ.ಎನ್.ಎಂ, ಸ್ಟ್ಯಾಪ್ ನರ್ಸ್, ಗ್ರಾಮ ಪಂಚಾಯಿತಿಯಲ್ಲಿ ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಕಾರ್ಯದರ್ಶಿಗಳು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯಲ್ಲಿ ಇಂಜಿನಿಯರ್ ಗಳ ಹುದ್ದೆಗಳು ಖಾಲಿಯಿದ್ದು, ನೇಮಕ ಮಾಡಲು ಕ್ರಮ ವಹಿಸಬೇಕೆಂದು ಕೋರಿದರು.

ಮಾನ್ಯ ಸದಸ್ಯರಾದ ಶ್ರೀಮತಿ ಜಯಶೀಲ ಜಯಶಂಕರ್ ರವರು ಮಾತನಾಡುತ್ತಾ, ಹಳೇಬೀಡು ಆಸ್ಪತ್ರೆಗೆ ಎಕ್ಸರೇ ಯಂತ್ರ ಅಳವಡಿಸುವ ಬಗ್ಗೆ ಏನು ಕ್ರಮ ವಹಿಸಲಾಗಿದೆ ಎಂದು ವಿವರ ನೀಡುವಂತೆ ಕೋರಿದರು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಜಿಲ್ಲೆಯಲ್ಲಿ ತಜ್ಞವೈದ್ಯರ ಕೊರತೆ ಬಹಳ ಇರುತ್ತದೆ. ಯಾರಾದರೂ ತಜ್ಞವೈದ್ಯರು ಲಭ್ಯವಿದ್ದಲ್ಲಿ ಮಾಹೆಯಾನ ಅವರಿಗೆ ರೂ.50000/ಗಳ ವೇತನವನ್ನು ನೀಡಲಾಗುತ್ತದೆ. ಆದರೆ, ಯಾರೂ ಸಿಕ್ಕುತ್ತಿಲ್ಲ. ಎಂ.ಬಿ.ಬಿ.ಎಸ್ ವೈದ್ಯರನ್ನು ಕೆ.ಪಿ.ಎಸ್.ಸಿ ಮುಖಾಂತರ ನೇಮಕ ಮಾಡಲಾಗುತ್ತಿದ್ದು, ಹಾಸನ ಜಿಲ್ಲೆಗೂ ಸಹ ಹಂಚಿಕೆ ಮಾಡುತ್ತಾರೆ. ನಂತರ ಸ್ವಲ್ಪಮಟ್ಟಿನ ವೈದ್ಯರ ಕೊರತೆ ಕಡಿಮೆಯಾಗುತ್ತದೆ. ಅಲ್ಲದೆ, ಎ.ಎನ್.ಎಂ. ಗಳನ್ನು ಸಾಕಷ್ಟು ಪ್ರಮಾಣದಲ್ಲಿ ನೇಮಕ ಮಾಡಲಾಗಿದೆ ಎಂದು ಸಭೆಗೆ ವಿವರ ನೀಡಿದರು. ಹಳೇಬೀಡು ಆಸ್ಪತ್ರೆಗೆ ಎಕ್ಸರೇ ಯಂತ್ರವನ್ನು ಅಳವಡಿಸಲು ಯಂತ್ರವನ್ನು ಖರೀದಿಸಲು ಈಗಾಗಲೇ ಟೆಂಡರ್ ಕರೆಯಲಾಗಿದ್ದು, ಮುಂದಿನ 2 ತಿಂಗಳಲ್ಲಿ ಯಂತ್ರವನ್ನು ಖರೀದಿಸಿ ಅಳವಡಿಸಲು ಕ್ರಮ ವಹಿಸಲಾಗುವುದು ಎಂದು ವಿವರ ನೀಡಿದರು.

ಮುಂದುವರೆದು, ಸರ್ಕಾರಿ ಆಸ್ಪತ್ರೆಗಳಿಗೆ ಔಷಧಿಗಳನ್ನು ಸಾಕಷ್ಟು ಪ್ರಮಾಣದಲ್ಲಿ ಡ್ರಗ್ಸ್ ವೇರ್ ಹೌಸಿಂಗ್, ನಿಂದ ಸರಬರಾಜು ಮಾಡಲಾಗುತ್ತದೆ. ಒಂದು ವೇಳೆ ಔಷಧಿಗಳು ಕೊರತೆಯಿದ್ದಲ್ಲಿ ಮುಕ್ತನಿಧಿಯಲ್ಲಿ ಲಭ್ಯವಿರುವ ಅನುದಾನದಲ್ಲಿ ಖರೀದಿಸಲು

| | | |
|---|---|---|
| | ಅವಕಾಶವಿರುತ್ತದೆ. ಆದ್ದರಿಂದ, ಯಾವ ಔಷಧಿಗೆ ವೈದ್ಯರು ಚೀಟಿ ಬರೆದುಕೊಟ್ಟಿದ್ದಾರೆ ಎಂಬ ಬಗ್ಗೆ ನಿಖರವಾದ ಮಾಹಿತಿ ನೀಡಿದಲ್ಲಿ ಅಂತಹ ವೈದ್ಯರ ಮೇಲೆ ಅಗತ್ಯ ಕ್ರಮ ವಹಿಸಲಾಗುವುದೆಂದು ತಿಳಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ದೇವೇಗೌಡ ಉರುಫ್ ಪಾಪಣ್ಣೀರವರು ಮಾತನಾಡುತ್ತಾ, ಹಾಸನ ಜಿಲ್ಲೆಯಲ್ಲಿ ಮೆಡಿಕಲ್ ಕಾಲೇಜು ಮತ್ತು ಜಿಲ್ಲಾ ಆಸ್ಪತ್ರೆ ಕಾರ್ಯನಿರ್ವಹಿಸುತ್ತಿವೆ. ಆದರೆ, ಆಸ್ಪತ್ರೆಯಲ್ಲಿ ಸಿಟಿ ಸ್ಕ್ಯಾನಿಂಗ್ ವ್ಯವಸ್ಥೆಯಿಲ್ಲದೆ ಗ್ರಾಮೀಣ ಪ್ರದೇಶದ ಬಡ ಜನರಿಗೆ ಖಾಸಗಿಯವರಲ್ಲಿ ಸಿಟಿ ಸ್ಕ್ಯಾನಿಂಗ್ ಮಾಡಿಸಲು ರೂ.2500/-ರಿಂದ 3000/ಗಳವರೆಗಿನ ಹಣದ ಅವಶ್ಯಕತೆಯಿರುತ್ತದೆ. ಆದರೆ, ಬೆಂಗಳೂರಿನಲ್ಲಿ ವಾಣೀವಿಲಾಸ ಆಸ್ಪತ್ರೆಯಲ್ಲಿ ಕೇವಲ ರೂ.300/-ಗಳಿಗೆ ಸಿಟಿ ಸ್ಕ್ಯಾನಿಂಗ್ ವ್ಯವಸ್ಥೆ ಸಿಕ್ಕುತ್ತಿದೆ. ಆದ್ದರಿಂದ, ಬಡ ಜನರಿಗೆ ಅನುಕೂಲವಾಗುವಂತೆ ಜಿಲ್ಲಾ ಆಸ್ಪತ್ರೆಗೆ ಸಿಟಿಸ್ಕ್ಯಾನಿಂಗ್ ಯಂತ್ರವನ್ನು ಖರೀದಿಸಿ ಅಳವಡಿಸುವ ಬಗ್ಗೆ ಜಿಲ್ಲಾ ಪಂಚಾಯಿತಿಯಿಂದ ನಿರ್ಣಯವನ್ನು ಮಾಡಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಕೃಷ್ಣಾನಾಯ್ಕರವರು ಮಾತನಾಡುತ್ತಾ, ಅರಸೀಕೆರೆ ತಾಲ್ಲೂಕು ಚೆಲ್ಲಾಪುರ ಗ್ರಾಮದಲ್ಲಿ ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯಗಳ ಇಲಾಖೆರವರು ಪ್ರೌಢಶಾಲೆ ಕಟ್ಟಡ ಕಾಮಗಾರಿಯನ್ನು ಕೈಗೆತ್ತಿಕೊಂಡಿದ್ದು, ಇನ್ನೂ ಪೂರ್ಣಗೊಳಿಸಿರುವುದಿಲ್ಲ. ಈ ಕಾರಣದಿಂದ ವಿದ್ಯಾರ್ಥಿಗಳಿಗೆ ಗುಡಿಸಲಿನಲ್ಲಿ ಪಾಠ ಮಾಡಲಾಗುತ್ತಿದೆ . ಆದ್ದರಿಂದ, ಕಟ್ಟಡವನ್ನು ಪೂರ್ಣಗೊಳಿಸಲು ಸಂಬಂಧಪಟ್ಟವರಿಗೆ ಸೂಕ್ತ ನಿರ್ದೇಶನ ನೀಡಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಅಮಿತ್ ಕುಮಾರ್ ಶೆಟ್ಟಿರವರು ಮಾತನಾಡುತ್ತಾ, ಅಡುಗೆ ಕೋಣೆ ನಿರ್ಮಾಣಕ್ಕೆ ನಿಗದಿಪಡಿಸಿರುವ ರೂ.60000/-ಗಳ ಹಣ ತುಂಬಾ ಕಡಿಮೆಯಿರುತ್ತದೆ. ಅರೇಹಳ್ಳಿಯಲ್ಲಿ 450 ಮಕ್ಕಳು ವ್ಯಾಸಂಗ ಮಾಡುತ್ತಿದ್ದು, ಅಡುಗೆ ಕೋಣೆ ಚಿಕ್ಕದಾಗಿದೆ. ಆದ್ದರಿಂದ, ಮಕ್ಕಳ ಸಂಖ್ಯೆಗನುಗುಣವಾಗಿ ಅಡುಗೆ ಮನೆ ಕಟ್ಟಡಕ್ಕೆ ಅನುದಾನವನ್ನು ನಿಗದಿಪಡಿಸುವುದು ಸೂಕ್ತವೆಂದು ಅಭಿಪ್ರಾಯಪಟ್ಟರು.<br>ಮಾನ್ಯ ಸದಸ್ಯರಾದ ಶ್ರೀ ಬಿ.ಡಿ.ಚಂದ್ರೇಗೌಡರವರು ಮಾತನಾಡುತ್ತಾ, ಸರ್ವ ಶಿಕ್ಷಣ ಅಭಿಯಾನ ಶಾಲೆಗಳಲ್ಲಿ ಮೂಲಭೂತ ಸೌಕರ್ಯಗಳು ಇರುವುದಿಲ್ಲ. ಈ ಬಗ್ಗೆ ಶಿಕ್ಷಣಾಧಿಕಾರಿ, ಸರ್ವ ಶಿಕ್ಷಣ ಅಭಿಯಾನ ರವರು ಕ್ರಮ ವಹಿಸಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಹುಚ್ಚೇಗೌಡರವರು ಮಾತನಾಡುತ್ತಾ, ಶಾಲಾಭಿವೃದ್ಧಿ ಸಮಿತಿಗೆ ಎಷ್ಟು ಕಟ್ಟಡಗಳು ಮಂಜೂರಾಗಿವೆ, ಅವುಗಳಲ್ಲಿ ಎಷ್ಟು ಕಟ್ಟಡಗಳನ್ನು ನಿರ್ಮಾಣ ಮಾಡಲಾಗಿದೆ, ಇನ್ನೂ ಬಾಕಿ ಎಷ್ಟು ಇವೆ ಎಂಬ ಬಗ್ಗೆ ಮಾಹಿತಿಯನ್ನು ಜಿಲ್ಲಾ ಪಂಚಾಯತ್ ಸದಸ್ಯರಿಗೆ ನೀಡಬೇಕೆಂದು ಕೋರಿದರು.<br>ಶಿಕ್ಷಣಾಧಿಕಾರಿ, ಸರ್ವ ಶಿಕ್ಷಣ ಅಭಿಯಾನರವರು ಉತ್ತರಿಸುತ್ತಾ, ಪ್ರಸಕ್ತ ಸಾಲಿನಲ್ಲಿ ಪ್ರತಿ ವಿದ್ಯಾರ್ಥಿಗೆ ರೂ.500/-ಗಳಂತೆ ಕೇಂದ್ರ ಸರ್ಕಾರದಿಂದ ರೂ.1021/-ಲಕ್ಷಗಳನ್ನು ಬಿಡುಗಡೆ ಮಾಡಿದ್ದು, ಸದರಿ ಅನುದಾನದಲ್ಲಿ ಶಾಲೆಗಳಿಗೆ ಅವಶ್ಯವಿರುವ ಪಿರೋಪಕರಣಗಳನ್ನು ಖರೀದಿ ಮಾಡಬಹುದಾಗಿರುತ್ತದೆ ಎಂದು ವಿವರ ನೀಡಿದರು. | |

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಸರ್ವ ಶಿಕ್ಷಣ ಅಭಿಯಾನದಡಿಯಲ್ಲಿ ಅನುಷ್ಠಾನ ಮಾಡುವ ಕಾರ್ಯಕ್ರಮಗಳ ಮೇಲುಸ್ತುವಾರಿ ಮಾಡಲು ಜಿಲ್ಲಾ ಪಂಚಾಯತ್ ಸದಸ್ಯರಿಗೆ ಅವಕಾಶವಿದ್ದು, ಈ ಬಗ್ಗೆ ಜಿಲ್ಲಾ ಪಂಚಾಯತ್ ಸದಸ್ಯರು ಗಮನಹರಿಸಬೇಕೆಂದು ಕೋರಿದರು.

ಮುಂದುವರೆದು, ಅಡುಗೆ ಕೋಣೆಗಳಿಗೆ ಸಂಬಂಧಿಸಿದಂತೆ, ಕೇಂದ್ರ ಸರ್ಕಾರದಿಂದ ಘಟಕ ವೆಚ್ಚವನ್ನು ನಿಗದಿಪಡಿಸಿದ್ದು, ಅನುದಾನದ ಕೊರೆಯುಂಟಾಗುತ್ತದೆ. ಶಾಲಾಬಿವೃದ್ಧಿ ಸಮಿತಿಯಲ್ಲಿ ಲಭ್ಯವಿರುವ ಅನುದಾನವನ್ನು ವಿನಿಯೋಗಿಸಿಕೊಂಡು ಉತ್ತಮ ಗುಣಮಟ್ಟದಲ್ಲಿ ನಿರ್ಮಿಸಲು ಕ್ರಮ ವಹಿಸುವುದು ಸೂಕ್ತವೆಂದು ಅಭಿಪ್ರಾಯಪಟ್ಟರು.

ಮಾನ್ಯ ಸದಸ್ಯರಾದ ಶ್ರೀ ಅಮಿತ್ ಕುಮಾರ್ ಶೆಟ್ಟಿರವರು ಮಾತನಾಡುತ್ತಾ, ಬೇಲೂರು ತಾ: ಚೀಕನಹಳ್ಳಿ ಗ್ರಾಮದಲ್ಲಿ ಪ್ರೌಢಶಾಲೆಗೆ ಆರ್.ಐ.ಡಿ.ಎಫ್ ನಲ್ಲಿ ಕಂಪ್ಯೂಟರ್ ಕೊಠಡಿಯು 2008-09ನೇ ಸಾಲಿನಲ್ಲಿ ಮಂಜೂರಾಗಿದ್ದು, ಇನ್ನೂ ಪೂರ್ಣಗೊಂಡಿರುವುದಿಲ್ಲ. ಸಂಬಂಧಪಟ್ಟವರಿಗೆ ನಿರ್ದೇಶನ ನೀಡಬೇಕೆಂದು ಕೋರಿದರು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಮುಂದಿನ ಸಭೆಗೆ ಕೊಠಡಿಯನ್ನು ಪೂರ್ಣಗೊಳಿಸಿ ಮಾಹಿತಿಯನ್ನು ನೀಡುವಂತೆ ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಬೇಲೂರು ಇವರಿಗೆ ತಿಳಿಸಿದರು.

ಮಾನ್ಯ ಸದಸ್ಯರಾದ ಶ್ರೀಮತಿ ಹೇಮಾವತಿ ಮಂಜುನಾಥ್ ರವರು ಮಾತನಾಡುತ್ತಾ, ಅಂಗಡಿಹಳ್ಳಿ ಮತ್ತು ಸಾಣೇನಹಳ್ಳಿ ಗ್ರಾಮಗಳಲ್ಲಿ ಸುವರ್ಣ ಗ್ರಾಮ ಯೋಜನೆಯಡಿಯಲ್ಲಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದ್ದು, ಕಾಮಗಾರಿಗಳನ್ನು ಪೂರ್ಣಗೊಳಿಸಿರುವುದಿಲ್ಲ. ಈ ಬಗ್ಗೆ ಉಪ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯಗಳ ಇಲಾಖೆರವರಿಗೆ ನಿರ್ದೇಶನ ನೀಡಬೇಕೆಂದು ಕೋರಿದರು.

ಉಪ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯಗಳ ಇಲಾಖೆರವರು ಉತ್ತರಿಸುತ್ತಾ, ಅಂಗಡಿಹಳ್ಳಿ ಮತ್ತು ಸಾಣೇನಹಳ್ಳಿ ಗ್ರಾಮಗಳಲ್ಲಿ ಬಾಕಿ ಉಳಿದಿರುವ ಸಮುದಾಯ ಭವನ , ಅಂಗನವಾಡಿ ಕಟ್ಟಡ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಲು ಕ್ರಮ ವಹಿಸುವುದಾಗಿ ಸಭೆಗೆ ಮಾಹಿತಿ ನೀಡಿದರು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಮಳೆಗಾಲ ಮುಕ್ತಾಯವಾಗಿದ್ದು, ಉಪ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯಗಳ ಇಲಾಖೆರವರು ಬಾಕಿ ಉಳಿದಿರುವ ಕಾಮಗಾರಿಗಳನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಲು ಕ್ರಮ ವಹಿಸಬೇಕೆಂದು ತಿಳಿಸಿದರು.

<table>
<tr><td></td><td>ಮಾನ್ಯ ಸದಸ್ಯರಾದ ಶ್ರೀ ದೇವೇಗೌಡ ಉರುಫ್ ಪಾಪಣ್ಣಿರವರು ಮಾತನಾಡುತ್ತಾ, ಸುವರ್ಣ ಗ್ರಾಮೋದಯ ಯೋಜನೆಯಡಿಯಲ್ಲಿ ಚನ್ನರಾಯಪಟ್ಟಣ ವಿಭಾಗಕ್ಕೆ ಅನುದಾನವನ್ನು ನೀಡಿಲ್ಲದಿರುವುದರಿಂದ, ಕಾಮಗಾರಿಗಳು ಸ್ಥಗಿತಗೊಂಡಿರುತ್ತವೆ. ಅಗತ್ಯ ಅನುದಾನವನ್ನು ಬಿಡುಗಡೆ ಮಾಡಬೇಕೆಂದು ಕೋರಿದರು.<br><br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಸುವರ್ಣ ಗ್ರಾಮೋದಯ ಯೋಜನೆಯಡಿ ಹಾಸನ ಜಿಲ್ಲೆಗೆ 1 ಮತ್ತು 3 ನೇ ಹಂತದ ಸುವರ್ಣ ಗ್ರಾಮಗಳು ಮಾತ್ರ ಮಂಜೂರಾಗಿರುದ್ದು, 2 ಮತ್ತು 4ನೇ ಹಂತದ ಗ್ರಾಮಗಳು ಹಾಸನ ಜಿಲ್ಲೆಗೆ ಮಂಜೂರಾಗಿರುವುದಿಲ್ಲ. 5ನೇ ಹಂತದ ಸುವರ್ಣ ಗ್ರಾಮೋದಯ ಯೋಜನೆಯಡಿ ಹಾಸನ ಜಿಲ್ಲೆಯ ಗ್ರಾಮಗಳನ್ನು ಆಯ್ಕೆ ಮಾಡುವ ಬಗ್ಗೆ ಮಾನ್ಯ ಜಿಲ್ಲಾ ಪಂಚಾಯತ್ ಸದಸ್ಯರ ನಿಯೋಗ ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರನ್ನು ಒತ್ತಾಯಿಸುವುದು ಸೂಕ್ತವೆಂದು ಅಭಿಪ್ರಾಯಪಟ್ಟರು.</td><td></td></tr>
<tr><td>ದಿನಾಂಕ: 29-09-2011ರಂದು ನಡೆದ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ಬಗ್ಗೆ</td><td>ದಿನಾಂಕ: 29-09-2011ರಂದು ನಡೆದ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಮಾನ್ಯ ಸಮಿತಿ ಅಧ್ಯಕ್ಷರಾದ ಶ್ರೀ.ಎಂ.ಕೆ.ದ್ಯಾವಯ್ಯ ರವರು ಸಭೆಗೆ ಮಂಡಿಸಿದರು. ಮಾನ್ಯ ಸದಸ್ಯರಾದ ಶ್ರೀಮತಿ ಪಾರ್ವತಮ್ಮರವರು ಅನುಮೋದಿಸಿದರು.<br><br>ಮಾನ್ಯ ಸದಸ್ಯರಾದ ಶ್ರೀಮತಿ ಇಂಧಿರಾ ಧರ್ಮಪ್ಪರವರು ಮಾತನಾಡುತ್ತಾ, ಡಾ: ಅಂಬೇಡ್ಕರ್ ಅಭಿವೃದ್ಧಿ ನಿಗಮದ ವತಿಯಿಂದ 2008-09, 2009-10 ಮತ್ತು 2010-11ನೇ ಸಾಲಿನಲ್ಲಿ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಎಷ್ಟು ಕೊಳವೆ ಬಾವಿಗಳು ಮಂಜೂರಾಗಿವೆ, ಅವುಗಳಲ್ಲಿ ಎಷ್ಟು ಕೊಳವೆ ಬಾವಿಗಳನ್ನು ಕೊರೆಯಲಾಗಿದೆ ಎಂಬ ಬಗ್ಗೆ ವಿವರ ನೀಡುವಂತೆ ಕೋರಿದರು.<br><br>ಜಿಲ್ಲಾ ವ್ಯವಸ್ಥಾಪಕರು, ಡಾ: ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮರವರು ಮಾತನಾಡುತ್ತಾ, 2008-09, 2009-10 ಮತ್ತು 2010-11ನೇ ಸಾಲಿನಲ್ಲಿ ಮಂಜೂರಾದ ಕೊಳವೆಬಾವಿಗಳಲ್ಲಿ ಇನ್ನೂ 158 ಕೊಳವೆ ಬಾವಿಗಳನ್ನು ಕೊರೆಯಬೇಕಾಗಿರುತ್ತದೆ ಎಂದು ಸಭೆಗೆ ವಿವರ ನೀಡಿದರು.<br><br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಕೊಳವೆ ಬಾವಿಗಳನ್ನು ಕೊರೆಯಲು ಹಿಂದೆ ನಿಗದಿಪಡಿಸಿದ್ದ ರಾಜಾ ರಿಗ್ ಸರ್ವಿಸ್ ಇವರ ಮೇಲೆ ಕೆಲವು ದೂರುಗಳು ಬಂದ ಹಿನ್ನಲೆಯಲ್ಲಿ ಅವರ ಮೇಲೆ ಕ್ರಮ ವಹಿಸುವಂತೆ ಸರ್ಕಾರಕ್ಕೆ ಈಗಾಗಲೇ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಸಭೆಗೆ ವಿವರ ನೀಡಿದರು.<br><br>ಮುಂದುವರೆದು, ಈಗ ನಿಗದಿಪಡಿಸಿರುವ ರಿಗ್ ಏಜನ್ಸಿಯವರ ಮುಖಾಂತರ ತ್ವರಿತಗತಿಯಲ್ಲಿ ಬಾಕಿಯಿರುವ ಕೊಳವೆ ಬಾವಿಗಳನ್ನು ಕೊರೆಯಲು ಕ್ರಮ ವಹಿಸಬೇಕೆಂದು ಜಿಲ್ಲಾ ವ್ಯವಸ್ಥಾಪಕರಿಗೆ ತಿಳಿಸಿದರು.<br><br>ಮಾನ್ಯ ಸದಸ್ಯರಾದ ಶ್ರೀ ಹುಚ್ಚೇಗೌಡರವರು ಮಾತನಾಡುತ್ತಾ, 2010-11ನೇ ಸಾಲಿನಲ್ಲಿ ಮಂಜೂರಾಗಿರುವ ಕೊಳವೆ ಬಾವಿಗಳಲ್ಲಿ ಕೆಲವು ಕೊಳವೆ ಬಾವಿಗಳನ್ನು ಕೊರೆದು ಉಳಿದವುಗಳನ್ನು ಕೊರೆಯದೆ ಅರ್ಧಕ್ಕೆ ನಿಲ್ಲಿಸಿದ್ದಾರೆ. ಇದರಿಂದ, ಫಲಾನುಭವಿಗಳಿಗೆ ತುಂಬಾ ತೊಂದರೆಯಾಗಿದ್ದು, ಸಾರ್ವಜನಿಕರು ಕೇಳುವ ಪ್ರಶ್ನೆಗಳಿಗೆ ಉತ್ತರ ನೀಡಲು ಸಾಧ್ಯವಾಗುತ್ತಿಲ್ಲ. ಆದ್ದರಿಂದ, ಕೊರೆಯದೆ ಬಾಕಿಯಿರುವ</td><td>ಸಭೆಯಲ್ಲಿ ಚರ್ಚಿಸಿದಂತೆ, ಗಂಗಾ ಕಲ್ಯಾಣ ಯೋಜನೆಯಡಿ ಜಿಲ್ಲಾ ಪಂಚಾಯಿತಿ ಸದಸ್ಯರು ಸೂಚಿಸುವ ಫಲಾನುಭವಿಗಳನ್ನು ಪರಿಗಣಿಸುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯಲ್ಲಿ ಸರ್ವಾನುಮತ ದಿಂದ ನಿರ್ಣಯಿಸಲಾಯಿತು.<br><br>ಹಾಗೂ ಸಮಗ್ರ ಚರ್ಚೆಯ ನಂತರ ದಿನಾಂಕ: 29-09-2011ರಂದು ನಡೆದ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಸಭೆಯಲ್ಲಿ ಸರ್ವಾನುಮತದಿಂದ ಅನುಮೋದಿಸಲಾಯಿತು.</td></tr>
</table>

| | | |
|---|---|---|
| | ಕೊಳವೆ ಬಾವಿಗಳನ್ನು ಕೊರೆಯಲು ಶೀಘ್ರ ಕ್ರಮ ವಹಿಸಬೇಕೆಂದು ಕೋರಿದರು ಮತ್ತು ಕೊಳವೆ ಬಾವಿಗಳನ್ನು ಕೊರೆಯುವಾಗ ಸಂಬಂಧಪಟ್ಟ ಜಿಲ್ಲಾ ಪಂಚಾಯತ್ ಸದಸ್ಯರ ಗಮನಕ್ಕೆ ತಂದು ಅನುಷ್ಠಾನ ಮಾಡಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ದೇವೇಗೌಡ ಉರುಫ್ ಪಾಪಣ್ಣಿರವರು ಮಾತನಾಡುತ್ತಾ, ಜಿಲ್ಲಾ ವ್ಯವಸ್ಥಾಪಕರು, ದೇವರಾಜು ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮರವರು ಹೊಳೆನರಸೀಪುರ ತಾಲ್ಲೂಕಿನ ಪ್ರಕರಣಕ್ಕೆ ಸಂಬಂಧಿಸಿದಂತೆ, ಅನುಪಾಲನಾ ವರದಿಯಲ್ಲಿ ಜಿಲ್ಲಾ ಪಂಚಾಯಿತಿ ಸದಸ್ಯರಿಗೇ ಒಂದು ರೀತಿಯ ಮಾಹಿತಿ ಮತ್ತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರಿಗೆ ಬೇರೆ ರೀತಿಯ ಮಾಹಿತಿಯನ್ನು ನೀಡಿ ತಪ್ಪು ದಾರಿಗೆ ಎಡೆಮಾಡಿಕೊಟ್ಟಿದ್ದು, ಇವರ ಮೇಲೆ ಕ್ರಮ ಜರುಗಿಸಬೇಕೆಂದು ಕೋರಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಈ ಹಿಂದೆ ಕೊಳವೆ ಬಾವಿಯನ್ನು ಕಡಿಮೆ ಅಳತೆಯಲ್ಲಿ ಕೊರೆದು, ಹೆಚ್ಚಿಗೆ ಅಳತೆ ನೀಡಿರುವ ಬಗ್ಗೆ ಸೂಕ್ತ ಕ್ರಮಕ್ಕಾಗಿ ವ್ಯವಸ್ಥಾಪಕ ನಿರ್ದೇಶಕರಿಗೆ ಪತ್ರ ಬರೆಯಲಾಗಿದೆ. ಈಗ ಕೆಲಸ ನಿರ್ವಹಿಸುತ್ತಿರುವ ವ್ಯವಸ್ಥಾಪಕ ನಿರ್ದೇಶಕರು, ತಪ್ಪು ಮಾಹಿತಿ ನೀಡಿರುವ ಬಗ್ಗೆ ಪರಿಶೀಲನೆ ನಡೆಸಿ ಕ್ರಮ ವಹಿಸುವುದಾಗಿ ತಿಳಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಹುಚ್ಚೇಗೌಡರವರು ಮಾತನಾಡುತ್ತಾ, ಅರಸೀಕೆರೆ ತಾಲ್ಲೂಕಿನಲ್ಲಿ 450 ಅಡಿಯನ್ನು ಕೊರೆದರೂ ಸಹ ನೀರು ಬರುತ್ತಿಲ್ಲ. ಆದರೆ, ಅಭಿವೃದ್ಧಿ ನಿಗಮದವರು 300 ಅಡಿಯವರೆಗೆ ಕೊರೆದು ನಂತರ ಕೊರೆಯಲು ಫಲಾನುಭವಿಗಳಿಂದ ದುಡ್ಡನ್ನು ಪಡೆಯುತ್ತಿರುವುದು ಕಂಡುಬರುತ್ತಿದೆ. ಆದ್ದರಿಂದ, ವಾಸ್ತವವಾಗಿ ಅಭಿವೃದ್ಧಿ ನಿಗಮದ ವತಿಯಿಂದ ಎಷ್ಟು ಅಡಿ ಕೊರೆಯಲು ಅವಕಾಶವಿದೆ ಎಂಬ ಬಗ್ಗೆ ಮಾಹಿತಿ ನೀಡಬೇಕೆಂದು ಕೋರಿದರು ಮತ್ತು ಯೋಜನೆಗಳಿಗೆ ವಿದ್ಯುದ್ದೀಕರಣದಲ್ಲಿಯೂ ಸಹ ಗುತ್ತಿಗೆದಾರರು ಇಲಾಖೆಯ ವತಿಯಿಂದ ಸಾಮಗ್ರಿಗಳು ಲಭ್ಯವಿದ್ದರೂ ಸಹ ಫಲಾನುಭವಿಗಳಿಂದ ಹಣವನ್ನು ಪಡೆಯುತ್ತಿದ್ದಾರೆ. ಆದ್ದರಿಂದ, ಈ ಬಗ್ಗೆ ಕ್ರಮ ವಹಿಸಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಈಶ್ವರಹಳ್ಳಿ ಲಕ್ಷ್ಮಣ್ ರವರು ಮಾತನಾಡುತ್ತಾ, ಗಂಗಾ ಕಲ್ಯಾಣ ಯೋಜನೆಯಡಿ ಜಿಲ್ಲಾ ಪಂಚಾಯಿತಿ ಸದಸ್ಯರು ಸೂಚಿಸುವ ಫಲಾನುಭವಿಗಳನ್ನೂ ಪರಿಗಣಿಸುವಂತೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಭೆಯನ್ನು ಸಲ್ಲಿಸಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಪುರುಷೋತ್ತಮ ರವರು ಮಾತನಾಡುತ್ತಾ, ಆಲೂರು ತಾಲ್ಲೂಕಿನಲ್ಲಿ ಶೌಚಾಲಯ ನಿರ್ಮಾಣಕ್ಕೆ ಹೆಚ್ಚಿನ ಅನುದಾನದ ಅವಶ್ಯಕತೆಯಿದ್ದು, ಅನುದಾನವನ್ನು ಬಿಡುಗಡೆ ಮಾಡಬೇಕೆಂದು ಕೋರಿದರು.<br>ಮುಖ್ಯ ಯೋಜನಾಧಿಕಾರಿಯವರು ಮಾತನಾಡುತ್ತಾ, ಕೇಂದ್ರ ಸರ್ಕಾರದಿಂದ ಬಿಡುಗಡೆಯಾಗಿದ್ದ ರೂ.109.00ಲಕ್ಷಗಳ ಅನುದಾನವನ್ನು ಈಗಾಗಲೇ ಗ್ರಾಮ ಪಂಚಾಯಿತಿಗಳಿಗೆ ಬಿಡುಗಡೆ ಮಾಡಲಾಗಿದ್ದು, ಕೇಂದ್ರ ಸರ್ಕಾರದಿಂದ ಪುನ: ಅನುದಾನ ಬಿಡುಗಡೆಯಾದಲ್ಲಿ ಹಣವನ್ನು ಬಿಡುಗಡೆ ಮಾಡಲಾಗುವುದು ಎಂದು ವಿವರ ನೀಡಿದರು. | |

ಮಾನ್ಯ ಸದಸ್ಯರಾದ ಶ್ರೀಮತಿ ಜಿ.ಟಿ.ಇಂಧಿರಾ ಧರ್ಮಪ್ಪರವರು ಮಾತನಾಡುತ್ತಾ, ಅಂಗನವಾಡಿ ಕೇಂದ್ರಗಳಲ್ಲಿ ಶೌಚಾಲಯ ನಿರ್ಮಾಣ ಮಾಡಲು ನಿಗದಿಪಡಿಸಿರುವ ರೂ.8000/-ಗಳ ಅನುದಾನ ತುಂಬಾ ಕಡಿಮೆಯಾಗಿರುತ್ತದೆ. ಆದ್ದರಿಂದ, ಗುತ್ತಿಗೆದಾರರು ಶೌಚಾಲಯಗಳನ್ನು ನಿರ್ಮಾಣ ಮಾಡಲು ಮುಂದೆ ಬರುತ್ತಿಲ್ಲ. ಈ ಬಗ್ಗೆ ಕ್ರಮ ವಹಿಸಬೇಕೆಂದು ಕೋರಿದರು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಅಂಗನವಾಡಿ ಕೇಂದ್ರಗಳಲ್ಲಿ ಸ್ತ್ರೀ ಶಕ್ತಿ ಸಂಘಗಳ ಸದಸ್ಯರುಗಳ ಮುಖಾಂತರ ಶೌಚಾಲಯ ಕಟ್ಟಡಗಳನ್ನು ಉತ್ತಮ ಗುಣಮಟ್ಟದಲ್ಲಿ ನಿರ್ಮಿಸಲಾಗುತ್ತಿದೆ. ಈ ಬಗ್ಗೆ ವಿವರಗಳನ್ನು ನೀಡುವಂತೆ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆರವರಿಗೆ ತಿಳಿಸಿದರು.

ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆರವರು ಮಾತನಾಡುತ್ತಾ, ಹೊಳೆನರಸೀಪುರ ತಾಲ್ಲೂಕಿನಲ್ಲಿ ಪ್ರಾಯೋಗಿಕವಾಗಿ ಅಂಗನವಾಡಿ ಕೇಂದ್ರದಲ್ಲಿ ಸ್ತ್ರೀ ಶಕ್ತಿ ಸಂಘಗಳ ಸದಸ್ಯರಿಂದ ಲಾಭವಿಲ್ಲದೆ ಶೌಚಾಲಯವನ್ನು ನಿರ್ಮಿಸಿದ್ದು, ಉತ್ತಮವಾಗಿರುತ್ತದೆ. ಈ ಶೌಚಾಲಯವನ್ನು ಮಾನ್ಯ ಸದಸ್ಯರಾದ ಶ್ರೀ ದೇವೇಗೌಡ ಉರುಫ್ ಪಾಪಣ್ಣರವರು ಪರಿಶೀಲಿಸಿ ಉತ್ತಮ ಪ್ರತಿಕ್ರಿಯೆಯನ್ನು ನೀಡಿರುತ್ತಾರೆಂದು ಸಭೆಗೆ ವಿವರ ನೀಡಿದರು.

ಮಾನ್ಯ ಸದಸ್ಯರಾದ ಶ್ರೀಮತಿ ಹೇಮಾವತಿ ಮಂಜುನಾಥ್ ರವರು ಮಾತನಾಡುತ್ತಾ, ಬೇಲೂರು ತಾಲ್ಲೂಕಿನಲ್ಲಿ ಹಿಂದುಳಿದ ವರ್ಗಗಳ ಇಲಾಖೆಯ ವತಿಯಿಂದ ನಡೆಯುತ್ತಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಕಟ್ಟಡಕ್ಕೆ ಬಾಡಿಗೆಯನ್ನು ಪಾವತಿಸುವ ಬಗ್ಗೆ ತೀರ್ಮಾನ ತೆಗೆದುಕೊಳ್ಳಬೇಕೆಂದು ಕೋರಿದರು.

ಮಾನ್ಯ ಸದಸ್ಯರಾದ ಶ್ರೀ ಬಿ.ಡಿ.ಚಂದ್ರೇಗೌಡರವರು ಮಾತನಾಡುತ್ತಾ, ಬೇಲೂರಿನಲ್ಲಿ ನಡೆಯುತ್ತಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಕಟ್ಟಡವು ಎಲ್ಲಾ ರೀತಿಯ ಮೂಲ ಸೌಕರ್ಯಗಳನ್ನು ಹೊಂದಿದ್ದು, ಹೊಸ ಕಟ್ಟಡವಾಗಿರುವುದರಿಂದ, ಹೆಚ್ಚಿನ ಬಾಡಿಗೆಯನ್ನು ಪಾವತಿಸುವುದು ಸೂಕ್ತವೆಂದು ಅಭಿಪ್ರಾಯಪಟ್ಟರು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಬೇಲೂರು ತಾಲ್ಲೂಕಿನಲ್ಲಿ ಹಿಂದುಳಿದ ವರ್ಗಗಳ ಇಲಾಖೆಯ ವತಿಯಿಂದ ನಡೆಯುತ್ತಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಕಟ್ಟಡಕ್ಕೆ ಬಾಡಿಗೆಯನ್ನು ಪುನರ್ ಪರಿಶೀಲಿಸಿ ನಿಗದಿಪಡಿಸುವ ಬಗ್ಗೆ ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ ಇಲಾಖೆ, ಹಾಸನ ಇವರಿಗೆ ತಿಳಿಸಿ ಅವರಿಂದ ಪ್ರಸ್ತಾವನೆ ಬಂದ ನಂತರ ಸೂಕ್ತ ಕ್ರಮ ವಹಿಸಲಾಗುವುದೆಂದು ವಿವರ ನೀಡಿದರು.

| | | |
|---|---|---|
| ದಿನಾಂಕ: 04-10-2011ರಂದು ನಡೆದ ಕೃಷಿ ಮತ್ತು ಕೈಗಾರಿಕಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ಬಗ್ಗೆ | ದಿನಾಂಕ: 04-10-2011ರಂದು ನಡೆದ ಕೃಷಿ ಮತ್ತು ಕೈಗಾರಿಕಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಮಾನ್ಯ ಸಮಿತಿ ಅಧ್ಯಕ್ಷರಾದ ಶ್ರೀ ಹುಚ್ಚೇಗೌಡರವರು ಸಭೆಗೆ ಮಂಡಿಸಿದರು. ಮಾನ್ಯ ಸದಸ್ಯರಾದ ಶ್ರೀಮತಿ ಕುಸುಮ ಬಾಲಕೃಷ್ಣರವರು ಅನುಮೋದಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಪುರುಷೋತ್ತಮ ರವರು ಮಾತನಾಡುತ್ತಾ, ಆಲೂರು ತಾಲ್ಲೂಕಿನಲ್ಲಿ ಪಶ್ಚಿಮಘಟ್ಟ ಅಭಿವೃದ್ಧಿ ಯೋಜನೆಯಡಿಯಲ್ಲಿ ಫಲಾನುಭವಿಗಳ ಪಟ್ಟಿಯನ್ನು ನೀಡಿದ್ದರೂ ಸಹ ಇಲ್ಲಿಯವರೆಗೆ ಫಲಾನುಭವಿಗಳಿಗೆ ಸಸಿಗಳನ್ನು ವಿತರಣೆ ಮಾಡಿರುವುದಿಲ್ಲ. ಅಲ್ಲದೆ, ವಲಯ ಅರಣ್ಯಾಧಿಕಾರಿಯವರು ಫಾರೆಸ್ಟ್ ವಾಚರ್ ಗಳನ್ನು ತುಂಬಾ ಹೀನಾಯವಾಗಿ ನಡೆಸಿಕೊಳ್ಳುತ್ತಿದ್ದಾರೆ, ಅವರಿಗೆ ವೇತನವನ್ನೂ ಸಹ ನೀಡಿರುವುದಿಲ್ಲ. ಈ ಬಗ್ಗೆ ಉಪ ಅರಣ್ಯ ಸಂರಕ್ಷಣಾಧಿಕಾರಿಯವರು ಕ್ರಮ ವಹಿಸಬೇಕೆಂದು ಕೋರಿದರು.<br>ಉಪ ಅರಣ್ಯ ಸಂರಕ್ಷಣಾಧಿಕಾರಿಯವರು ಉತ್ತರಿಸುತ್ತಾ, ವಲಯ ಅರಣ್ಯಾಧಿಕಾರಿಯವರಿಂದ ಮಾಹಿತಿಯನ್ನು ಪಡೆದು ಮುಂದಿನ ಸಭೆಗೆ ಮಂಡಿಸುವುದಾಗಿ ವಿವರ ನೀಡಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಇಲಾಖಾಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ಸ್ಥಳೀಯ ಜನಪ್ರತಿನಿಧಿಯವರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಕಾರ್ಯಕ್ರಮವನ್ನು ಸಮರ್ಪಕವಾಗಿ ಅನುಷ್ಟಾನ ಮಾಡಲು ಕ್ರಮ ವಹಿಸುವಂತೆ ಅಧಿಕಾರಿ/ಸಿಬ್ಬಂದಿಯವರಿಗೆ ನಿರ್ದೇಶನ ನೀಡುವಂತೆ ಉಪ ಅರಣ್ಯ ಸಂರಕ್ಷಣಾಧಿಕಾರಿಯವರಿಗೆ ತಿಳಿಸಿದರು. | ಸಮಗ್ರವಾಗಿ ಚರ್ಚಿಸಿದ ನಂತರ ದಿನಾಂಕ: 04-10-2011ರಂದು ನಡೆದ ಕೃಷಿ ಮತ್ತು ಕೈಗಾರಿಕಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಸಭೆಯಲ್ಲಿ ಸರ್ವಾನುಮತದಿಂದ ಅನುಮೋದಿಸಲಾಯಿತು. |
| ದಿನಾಂಕ: 09-11-2011ರಂದು ನಡೆದ ಸಾಮಾನ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ಬಗ್ಗೆ | ದಿನಾಂಕ: 09-11-2011ರಂದು ನಡೆದ ಸಾಮಾನ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಶ್ರೀಮತಿ ಸುಲೋಚನಾ ರಾಮಕೃಷ್ಣರವರು ಸಭೆಗೆ ಮಂಡಿಸಿದರು. ಮಾನ್ಯ ಸದಸ್ಯರಾದ ಶ್ರೀ ದೇವೇಗೌಡ( ಉರುಫ್ ಪಾಪಣ್ಣಿ)ರವರು ಸಭೆಯ ನಡವಳಿಗಳನ್ನು ಅನುಮೋದಿಸಿದರು. | ಸಮಗ್ರ ಚರ್ಚೆಯ ನಂತರ ದಿನಾಂಕ: 09-11-2011ರಂದು ನಡೆದ ಸಾಮಾನ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಸಭೆಯಲ್ಲಿ ಸರ್ವಾನುಮತದಿಂದ ಅನುಮೋದಿಸಲಾಯಿತು. |
| ಕುಡಿಯುವ ನೀರಿನ ಯೋಜನೆಗಳ ಬಗ್ಗೆ | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಕುಡಿಯುವ ನೀರಿನ ಯೋಜನೆಗೆ ಸಂಬಂಧಿಸಿದಂತೆ, ಹಿಂದಿನ ಆದೇಶದಲ್ಲಿ ರೂ.2.00ಲಕ್ಷಗಳವರೆಗಿನ ಕಾಮಗಾರಿಗಳನ್ನು ತುಂಡು ಗುತ್ತಿಗೆ ಆಧಾರದ ಮೇಲೆ ಅನುಷ್ಟಾನ ಮಾಡಲು ಅವಕಾಶವಿತ್ತು. ಸರ್ಕಾರ ಈಗ ಹೊರಡಿಸಿರುವ ಆದೇಶದಲ್ಲಿ ರೂ.5.00ಲಕ್ಷಗಳವರೆಗಿನ ಕಾಮಗಾರಿಗಳನ್ನು ತುಂಡು ಗುತ್ತಿಗೆ ಆಧಾರದ ಮೇಲೆ ಅನುಷ್ಟಾನ ಮಾಡಲು ಅವಕಾಶ ಮಾಡಲಾಗಿದೆ. ಈ ಬಗ್ಗೆ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚನ್ನರಾಯಪಟ್ಟಣ ಮತ್ತು ಹಾಸನ | |

| | | |
|---|---|---|
| | ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್ ರವರು ಮಾತನಾಡುತ್ತಾ, ತಾಲ್ಲೂಕು ಮಟ್ಟದಲ್ಲಿ ಕಾಮಗಾರಿಗಳು ಸಮರ್ಪಕವಾಗಿ ಮತ್ತು ಉತ್ತಮ ಗುಣಮಟ್ಟದಲ್ಲಿ ಅನುಷ್ಠಾನ ಮಾಡಿರುವ ಬಗ್ಗೆ ಪರಿಶೀಲನೆ ನಡೆಸಲು ಅಧಿಕಾರಿ/ ಜನಪ್ರತಿನಿಧಿಗಳನ್ನೊಳಗೊಂಡ ಕಾಮಗಾರಿ ಸಮಿತಿಯನ್ನು ರಚಿಸಲು ಹಿಂದಿನ ಸಭೆಯಲ್ಲಿ ಪ್ರಸ್ತಾಪಿಸಲಾಗಿತ್ತು. ಆದರೆ, ಈ ಬಗ್ಗೆ ಯಾವುದೇ ಕ್ರಮ ವಹಿಸಿರುವುದಿಲ್ಲ. ಈ ಕುರಿತು ವಿವರ ನೀಡಬೇಕೆಂದು ಕೋರಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ತಾಲ್ಲೂಕು ಮಟ್ಟದಲ್ಲಿ ಶಾಸಕರ ಅಧ್ಯಕ್ಷತೆಯಲ್ಲಿ ಜಾಗೃತಿ ಸಮಿತಿಯು ಕಾರ್ಯ ನಿರ್ವಹಿಸುತ್ತಿದ್ದು, ಸದರಿ ಸಮಿತಿಯಲ್ಲಿ ಜಿಲ್ಲಾ ಪಂಚಾಯತ್ ಸದಸ್ಯರೂ ಸಹ ಸದಸ್ಯರಿರುತ್ತಾರೆ. ಆದ್ದರಿಂದ, ಈ ವಿಷಯದ ಬಗ್ಗೆ ಜಾಗೃತಿ ಸಮಿತಿಯಲ್ಲಿ ಪ್ರಸ್ತಾಪಿಸುವುದು ಸೂಕ್ತವೆಂದು ಅಭಿಪ್ರಾಯಪಟ್ಟರು. ಯಾವ ಕಾಮಗಾರಿಯನ್ನು ಸಮರ್ಪಕವಾಗಿ ಅನುಷ್ಠಾನ ಮಾಡಿರುವುದಿಲ್ಲ; ಅಂತಹ ಕಾಮಗಾರಿಗಳ ಬಗ್ಗೆ ತಿಳಿಸಿದಲ್ಲಿ ಸಂಬಂಧಪಟ್ಟವರ ಮೇಲೆ ಕ್ರಮ ವಹಿಸಲಾಗುವುದೆಂದು ತಿಳಿಸಿದರು. ಅಲ್ಲದೆ, ಟಾಸ್ಕ್ ಫೋರ್ಸ್ ಅಡಿಯಲ್ಲಿ ಪ್ರತಿ ಶಾಸಕರಿಗೂ ರೂ.15.00ಲಕ್ಷಗಳ ಅನುದಾನ ನೀಡಲಾಗಿದ್ದು, ಕುಡಿಯುವ ನೀರಿನ ವಿವಿಧ ಯೋಜನೆಗಳನ್ನು ಕೈಗೆತ್ತಿಕೊಳ್ಳಬಹುದಾಗಿರುತ್ತದೆ ಎಂದು ತಿಳಿಸಿದರು. ಜಿಲ್ಲೆಯಲ್ಲಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದಲ್ಲಿ ಸಿಬ್ಬಂದಿ ಕೊರತೆಯಿದ್ದು, ಬಿ.ಇ. ಸಿವಿಲ್ ವ್ಯಾಸಂಗ ಮಾಡಿರುವ ಅಭ್ಯರ್ಥಿಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲಾವುದೆಂದು ಸಭೆಗೆ ವಿವರ ನೀಡಿದರು.<br>ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್ ರವರು ಮಾತನಾಡುತ್ತಾ, ಪಂಚಾಯತ್ ರಾಜ್ ವಿಭಾಗ ಮತ್ತು ಉಪ ವಿಭಾಗಗಳಲ್ಲಿ 10-15 ವರ್ಷಗಳಿಂದ ಒಂದೇ ಸ್ಥಳದಲ್ಲಿ ಕೆಲಸ ನಿರ್ವಹಿಸುತ್ತಿರುವ ಇಂಜಿನಿಯರ್ ಗಳನ್ನು ಸ್ಥಾನಪಲ್ಲಟ ಮಾಡುವುದು ಸೂಕ್ತವೆಂದು ಅಭಿಪ್ರಾಯಪಟ್ಟರು.<br>ಮಾನ್ಯ ಸದಸ್ಯರಾದ ಶ್ರೀಮತಿ ಜ್ಯೋತಿ ಗುರುದೇವ್ ರವರು ಮಾತನಾಡುತ್ತಾ, ಕಾಮಗಾರಿಗಳು ಪೂರ್ಣಗೊಂಡ ತಕ್ಷಣವೇ ಕಾಮಗಾರಿ ಪರಿಶೀಲನೆ ನಡೆಸಲು ಸಂಬಂಧಪಟ್ಟವರಿಗೆ ನಿರ್ದೇಶನ ನೀಡಬೇಕೆಂದು ಕೋರಿದರು.<br>ಮುಂದುವರೆದು, ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗರವರಿಗೆ ನೀಡಿರುವ ವಾಹನವು ತುಂಬಾ ಹಳೆಯದಾಗಿದ್ದು, ರಸ್ತೆಯ ಮಧ್ಯದಲ್ಲಿಯೇ ಕೆಟ್ಟು ಹೋಗುತ್ತಿರುತ್ತದೆ. ಆದ್ದರಿಂದ, ಅವರಿಗೆ ಹೊಸ ವಾಹನವನ್ನು ನೀಡಲು ಕ್ರಮ ವಹಿಸಬೇಕೆಂದು ಕೋರಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಕಾಮಗಾರಿಗಳು ಪೂರ್ಣಗೊಳಿಸಿದ ನಂತರ ಬಿಲ್ ಪಾವತಿಸಲು ವಿಳಂಬವಾಗದ ರೀತಿಯಲ್ಲಿ ಕಾಮಗಾರಿಗಳನ್ನು ತಪಾಸಣೆ ನಡೆಸಲು ಸಂಬಂಧಪಟ್ಟ ನೋಡಲ್ ಅಧಿಕಾರಿಯವರಿಗೆ ನಿರ್ದೇಶನ ನೀಡಲಾಗಿದೆ. ವಾಹನಗಳನ್ನು ಆರ್.ಟಿ.ಒ ದೃಡೀಕರಣ ಮಾಡುವುದಕ್ಕೆ ಪ್ರಸ್ತಾವನೆಯನ್ನು ಕಳುಹಿಸಲು ಕ್ರಮ ವಹಿಸಿ, ಸಹಾಯಕ ಕಾರ್ಯಪಾಲಕ ಅಭಿಯಂತರರುಗಳಿಗೆ ಹೊಸ ವಾಹನ ಖರೀದಿಗೆ ಸಂಬಂಧಿಸಿದಂತೆ, ಕ್ರಮ ವಹಿಸಲಾಗುವುದು ಎಂದು ತಿಳಿಸಿದರು. | |

| | | | |
|---|---|---|---|
| | | ಮಾನ್ಯ ಸದಸ್ಯರಾದ ಶ್ರೀ ಅಮಿತ್ ಕುಮಾರ್ ಶೆಟ್ಟಿರವರು ಮಾತನಾಡುತ್ತಾ, ಗುತ್ತಿಗೆದಾರರು, ಕಾಮಗಾರಿಗಳನ್ನು ಪೂರ್ಣಗೊಳಿಸಿರುವುದಿಲ್ಲ. ಬೇಲೂರು ತಾ: ತುಂಬದೇವರ ಹಳ್ಳಿ ಗ್ರಾಮ ಪಂಚಾಯಿತಿ ಬಿಟ್ಟೇಶ್ವರ ಗ್ರಾಮದಲ್ಲಿ ಕುಡಿಯುವ ನೀರಿನ ಯೋಜನೆಯನ್ನು ಅಪೂರ್ಣಗೊಳಿಸಿರುತ್ತಾರೆ. ಇದೇ ರೀತಿ ಹಲವು ಕಾಮಗಾರಿಗಳನ್ನು ಅರ್ಧಕ್ಕೇ ನಿಲ್ಲಿಸಿರುತ್ತಾರೆ. ಈ ಬಗ್ಗೆ ಮಾನ್ಯ ಮಾಜಿ ಅಧ್ಯಕ್ಷರ ಅಧ್ಯಕ್ಷತೆಯಲ್ಲಿ ಗುತ್ತಿಗೆದಾರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಅಧಿಕಾರಿಗಳೊಂದಿಗೆ ಸಭೆಯನ್ನು ನಡೆಸಿ ಚರ್ಚಿಸಿದ್ದರೂ ಸಹ ಗುತ್ತಿಗೆದಾರರು ಕಾಮಗಾರಿಗಳನ್ನು ಪೂರ್ಣಗೊಳಿಸಿರುವುದಿಲ್ಲ. ಆದ್ದರಿಂದ, ಕಾಮಗಾರಿಗಳನ್ನು ಪೂರ್ಣಗೊಳಿಸುವ ಬಗ್ಗೆ ಸಂಬಂಧಪಟ್ಟವರಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಪುರುಷೋತ್ತಮರವರು ಮಾತನಾಡುತ್ತಾ, ಆಲೂರು ತಾಲ್ಲೂಕಿನಲ್ಲಿಯೂ ಸಹ ಕುಡಿಯುವ ನೀರಿನ ಸಮಸ್ಯೆಯಿದ್ದು, ಕುಡಿಯುವ ನೀರಿನ ಯೋಜನೆಗಳಿಗೆ ಸಂಬಂಧಿಸಿದಂತೆ ಸರ್ಕಾರಕ್ಕೆ ಮತ್ತು ಮಾನ್ಯ ಜಿಲ್ಲಾಧಿಕಾರಿಯವರಿಗೆ ಪ್ರಸ್ತಾವನೆಯನ್ನು ಸಲ್ಲಿಸಬೇಕೆಂದು ಕೋರಿದರು. | |
| | ರಸ್ತೆ ಸಂಪರ್ಕ ಬಗ್ಗೆ | ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್ ರವರು ಮಾತನಾಡುತ್ತಾ, ಜಿಲ್ಲೆಗೆ ರಸ್ತೆ ಅಭಿವೃದ್ಧಿಗೆ ಹಣದ ಅವಶ್ಯಕತೆಯಿದ್ದು, ಅಗತ್ಯ ಅನುದಾವನ್ನು ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಅಮಿತ್ ಕುಮಾರ್ ಶೆಟ್ಟಿರವರು ಮಾತನಾಡುತ್ತಾ, ಮಲೆನಾಡು ಪ್ರದೇಶದಲ್ಲಿ ಅತಿವೃಷ್ಟಿಯಿಂದ ರಸ್ತೆಗಳು ತುಂಬಾ ಹಾಳಾಗಿರುತ್ತವೆ. ಆದ್ದರಿಂದ, ಜಿಲ್ಲಾಧಿಕಾರಿಯವರಿಗೆ ಪ್ರಕೃತಿ ವಿಕೋಪ ನಿಧಿಯಡಿಯಲ್ಲಿ ರಸ್ತೆಗಳನ್ನು ದುರಸ್ಥಿಪಡಿಸುವಂತೆ ಜಿಲ್ಲಾಧಿಕಾರಿಯವರಿಗೆ ಪ್ರಸ್ತಾವನೆ ಸಲ್ಲಿಸಬೇಕೆಂದು ಕೋರಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಜಿಲ್ಲಾ ಪಂಚಾಯಿತಿ ಸದಸ್ಯರ ನಿಯೋಗ ಹೋಗಿ ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರನ್ನು ಭೇಟಿ ಮಾಡಿ ಜಿಲ್ಲೆಗೆ ಯಾವ ಯಾವ ಯೋಜನೆಗಳಿಗೆ ಅನುದಾನದ ಅಗತ್ಯ ಇದೆ ಎಂಬ ಬಗ್ಗೆ ಒಂದು ಮೆಮೊರೆಂಡಮ್ ಸಿದ್ಧಪಡಿಸಿ ಸಲ್ಲಿಸುವುದು ಸೂಕ್ತವೆಂದು ಅಭಿಪ್ರಾಯಪಟ್ಟರು. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಜಿಲ್ಲೆಯಲ್ಲಿ ರಸ್ತೆ ಅಭಿವೃದ್ಧಿಗೆ ಅವಶ್ಯ ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |
| | | ಮಾನ್ಯ ಸದಸ್ಯರಾದ ಶ್ರೀ ಸ್ವಾಮಿಗೌಡರವರು ಮಾತನಾಡುತ್ತಾ, ಸಾಮಾನ್ಯ ಸಭೆಯಲ್ಲಿ ಇಲಾಖಾವಾರು ಚರ್ಚೆಗೆ ಅವಕಾಶ ಮಾಡಿಕೊಟ್ಟಲ್ಲಿ ಎಲ್ಲಾ ಇಲಾಖೆಯ ಯೋಜನೆಗಳ ಬಗ್ಗೆ ತಿಳಿಯಲು ಸದಸ್ಯರಿಗೆ ಅವಕಾಶವಾಗುತ್ತದೆ. ಇಲ್ಲದಿದ್ದಲ್ಲಿ ಸದಸ್ಯರು ಪ್ರಸ್ತಾಪಿಸಿರುವ ಇಲಾಖೆಯವರು ಮಾತ್ರ ಉತ್ತರಿಸಿ ಬೇರೆ ಇಲಾಖೆಯವರು ಸುಮ್ಮನೇ ಹೋಗುತ್ತಾರೆ. ಆದ್ದರಿಂದ, ಮುಂದಿನ ಸಭೆಯಿಂದ ಇಲಾಖಾವಾರು ಚರ್ಚೆಗೆ ಅವಕಾಶ ಮಾಡಿಕೊಡಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಅಮಿತ್ ಕುಮಾರ್ ಶೆಟ್ಟಿರವರು ಮಾತನಾಡುತ್ತಾ, ಜಿಲ್ಲಾ ಪಂಚಾಯಿತಿ ಕಟ್ಟಡದ ಆವರಣದಲ್ಲಿ ವಾಹನಗಳಿಗೆ ಸುರಕ್ಷತೆಯಿರುವುದಿಲ್ಲ. ಹೊಯ್ಸಳ ಸಭಾಂಗಣದಲ್ಲಿ ಮೈಕ್ ವ್ಯವಸ್ಥೆ ಸರಿಯಿರುವುದಿಲ್ಲ. ಸಭೆಯಲ್ಲಿ ನೀಡುವ ಊಟ/ಉಪಹಾರಕ್ಕೆ ಬೇರೆ ಸ್ಥಳದ ವ್ಯವಸ್ಥೆಯನ್ನು ಮಾಡಲು ಕ್ರಮ ವಹಿಸಬೇಕೆಂದು ಕೋರಿದರು. | ಸಭೆಯಲ್ಲಿ ಚರ್ಚಿಸಿದ ವಿಷಯಗಳ ಬಗ್ಗೆ, ಸಂಬಂಧಪಟ್ಟ ಇಲಾಖಾಧಿಕಾರಿಗಳು ಅಗತ್ಯ ಕ್ರಮ ವಹಿಸಬೇಕೆಂದು ತಿಳಿಸಲಾಯಿತು. |

| | | | |
|---|---|---|---|
| | | ಮಾನ್ಯ ಸದಸ್ಯರಾದ ಶ್ರೀ ಬಿ.ಡಿ.ಚಂದ್ರೇಗೌಡರವರು ಮಾತನಾಡುತ್ತಾ, ಹೊಯ್ಸಳ ಸಭಾಂಗಣವನ್ನು ಬೇರೆ ಬೇರೆ ಇಲಾಖೆಗಳ ಕಾರ್ಯಕ್ರಮಗಳಿಗೆ ನೀಡಲಾಗುತ್ತಿದೆ. ಇದರಿಂದ, ಸಭಾಂಗಣದ ಸ್ವಚ್ಛತೆ ಹಾಳಾಗುತ್ತಿದೆ. ಇನ್ನು ಮುಂದೆ ಸಭಾಂಗಣವನ್ನು ಬೇರೆ ಇಲಾಖೆಯ ಸಭೆಗಳಿಗೆ ನೀಡಬಾರದೆಂದು ತಿಳಿಸಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ವಾಹನ ನಿಲುಗಡೆಗೆ ಸಂಬಂಧಿಸಿದಂತೆ, ಈಗ ಸಮರ್ಪಕವಾಗಿ ವ್ಯವಸ್ಥೆಯನ್ನು ಮಾಡಲಾಗಿದೆ. ಹೊಯ್ಸಳ ಸಭಾಂಗಣವನ್ನು ನವೀಕರಣಗೊಳಿಸಲು ಕ್ರಮ ವಹಿಸಲಾಗುವುದು ಎಂದು ಸಭೆಗೆ ವಿವರ ನೀಡಿದರು.<br>ಮಾನ್ಯ ಸದಸ್ಯರಾದ ಶ್ರೀ ಕೃಷ್ಣಾ ನಾಯ್ಕರವರು ಮಾತನಾಡುತ್ತಾ, ಹಾಸನ ದುದ್ದ ರಸ್ತೆ ತುಂಬಾ ಹದಗೆಟ್ಟಿದ್ದು, ಹಾಸನದ ಕಡೆಯಿಂದಲೇ ದುರಸ್ಥಿಪಡಿಸಲು ಕ್ರಮ ವಹಿಸಬೇಕೆಂದು ಕೋರಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಹಾಸನದ ಕಡೆಯಿಂದ ರಸ್ತೆ ಬದಿಯಲ್ಲಿರುವ ಮರಗಳನ್ನು ತೆರವುಗೊಳಿಸಿದಲ್ಲಿ ಗುತ್ತಿಗೆದಾರರು ಹಾಸನದ ಕಡೆಯಿಂದಲೇ ದುರಸ್ಥಿಪಡಿಸಲು ಕ್ರಮ ವಹಿಸಲಾಗುವುದು ಎಂದು ತಿಳಿಸಿದ್ದಾರೆ ಎಂದು ಸಭೆಗೆ ವಿವರ ನೀಡಿದರು. | |
| | ಚನ್ನರಾಯಪಟ್ಟಣ ನಗರದ ಪಕ್ಕವಿರುವ ತೋಟಗಾರಿಕಾ ಇಲಾಖೆಗೆ ಸಂಬಂಧಿಸಿದ 51 ಎಕರೆ ಅಮ್ಮನಕಟ್ಟೆ ತೋಟಗಾರಿಕೆ ಫಾರಂನ್ನು ಮಿನಿ ಲಾಲ್ ಬಾಗ್ ಮಾದರಿಯಲ್ಲಿ ಸುಂದರವಾದ ಉದ್ಯಾನವನ್ನಾಗಿ ನಿರ್ಮಾಣ ಮಾಡಿ ಅಭಿವೃದ್ಧಿಪಡಿಸಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವ ಬಗ್ಗೆ . | ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್ ರವರು ಮಾತನಾಡುತ್ತಾ, ಚನ್ನರಾಯಪಟ್ಟಣ ನಗರಕ್ಕೆ ಸೇರಿರುವ ತೋಟಗಾರಿಕೆ ಇಲಾಖೆಯ ವ್ಯಾಪ್ತಿಗೆ ಬರುವ ಅಮ್ಮನಕಟ್ಟೆ ತೋಟಗಾರಿಕಾ ಫಾರಂನಲ್ಲಿರುವ 51 ಎಕರೆ ಜಮೀನಿನಲ್ಲಿ ಯಾವುದೇ ತೋಟಗಾರಿಕಾ ಚಟುವಟಿಕೆಗಳನ್ನು ಮಾಡದೇ ಹಾಗೆಯೇ ಇರುತ್ತದೆ. ಆದ್ದರಿಂದ, ಸದರಿ ಜಾಗದಲ್ಲಿ ಮಿನಿ ಲಾಲ್ ಬಾಗ್ ರೀತಿಯಲ್ಲಿ ಉದ್ಯಾನವನ್ನು ನಿರ್ಮಿಸುವ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯಲ್ಲಿ ನಿರ್ಣಯವನ್ನು ಮಾಡಬೇಕೆಂದು ಕೋರಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಸುವರ್ಣ ಕರ್ನಾಟಕ ಸಂಸ್ಥೆಯ ವತಿಯಿಂದ ಉದ್ಯಾನವನ್ನು ನಿರ್ಮಾಣ ಮಾಡಲಾಗುತ್ತಿದ್ದು, ಸದರಿ ಸಂಸ್ಥೆಗೆ ಅಮ್ಮನಕಟ್ಟೆ ಫಾರಂನಲ್ಲಿ ಮಿನಿ ಲಾಲ್ ಬಾಗ್ ರೀತಿಯಲ್ಲಿ ಉದ್ಯಾನವನ್ನು ನಿರ್ಮಿಸಲು ಜಿಲ್ಲಾ ಪಂಚಾಯಿತಿಯಿಂದ ಪ್ರಸ್ತಾವನೆಯನ್ನು ಸಲ್ಲಿಸುವುದು ಸೂಕ್ತವೆಂದು ಅಭಿಪ್ರಾಯಪಟ್ಟರು. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಚನ್ನರಾಯಪಟ್ಟಣ ನಗರಕ್ಕೆ ಸೇರಿರುವ ತೋಟಗಾರಿಕೆ ಇಲಾಖೆಯ ವ್ಯಾಪ್ತಿಗೆ ಬರುವ ಅಮ್ಮನಕಟ್ಟೆ ತೋಟಗಾರಿಕಾ ಫಾರಂನಲ್ಲಿರುವ 51 ಎಕರೆ ಜಮೀನಿನಲ್ಲಿ ಮಿನಿ ಲಾಲ್ ಬಾಗ್ ರೀತಿಯಲ್ಲಿ ಉದ್ಯಾನವನ್ನು ನಿರ್ಮಿಸುವ ಬಗ್ಗೆ ಸರ್ಕಾರಕ್ಕೆ ಹಾಗೂ ಸುವರ್ಣ ಕರ್ನಾಟಕ ಸಂಸ್ಥೆಗೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯಲ್ಲಿ ಸರ್ವಾನುಮತ ದಿಂದ ನಿರ್ಣಯಿಸಲಾಯಿತು. |

| | | | |
|---|---|---|---|
| | ದ್ಯೋಗ ಖಾತರಿ ಯೋಜನೆಯಡಿ ಕಾರ್ಮಿಕರಿಗೆ ನೀಡುತ್ತಿರುವ ಕೂಲಿಯು ಕನಿಷ್ಟ ವೇತನ ಕಾಯಿದೆ ದರಕ್ಕಿಂತ ಕಡಿಮೆಯಿರುವ ಬಗ್ಗೆ ಚರ್ಚಿಸಲು ಕಾರ್ಮಿಕ ಇಲಾಖೆಯ ಅಧಿಕಾರಿಗಳನ್ನು ಕರೆಸುವ ಬಗ್ಗೆ | ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್ ರವರು ಮಾತನಾಡುತ್ತಾ, ಮಹಾತ್ಮ ಗಾಂಧಿ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ನೀಡುತ್ತಿರುವ ಕೂಲಿಯ ದರವು ಕನಿಷ್ಟ ವೇತನ ಕಾಯಿದೆ ದರಕ್ಕಿಂತ ಕಡಿಮೆಯಿರುತ್ತದೆ. ಇದರಿಂದ ಕನಿಷ್ಟ ವೇತನ ಕಾಯಿದೆಯನ್ನು ಪಾಲಿಸಿದಂತಾಗುವುದಿಲ್ಲ. ಅಲ್ಲದೆ, ಘನ ಉಚ್ಚ ನ್ಯಾಯಾಲಯವೂ ಸಹ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಕನಿಷ್ಟ ವೇತನ ಕಾಯಿದೆ ದರಕ್ಕಿಂತ ಕಡಿಮೆಯಿರುವ ಬಗ್ಗೆ ಆಕ್ಷೇಪವನ್ನು ವ್ಯಕ್ತಪಡಿಸಿರುತ್ತದೆ. ಆದ್ದರಿಂದ, ಈ ಬಗ್ಗೆ ವಿವರ ನೀಡಬೇಕೆಂದು ಕೋರಿದರು.<br>ಕಾರ್ಮಿಕ ಅಧಿಕಾರಿಯವರು ಮಾತನಾಡುತ್ತಾ, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಕಾಯಿದೆಯಲ್ಲಿಯೇ ವೇತನವನ್ನು ನಿಗದಿಪಡಿಸಿರುತ್ತಾರೆ. ಆದ್ದರಿಂದ, ಈ ಬಗ್ಗೆ ಕೇಂದ್ರ ಸರ್ಕಾರದ ಹಂತದಲ್ಲಿಯೇ ವೇತನ ದರವನ್ನು ಹೆಚ್ಚಿಸಬೇಕಾಗಿರುತ್ತದೆ ಎಂದು ಅಭಿಪ್ರಾಯಪಟ್ಟರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಹಾಲಿ ನಿಗದಿಪಡಿಸಿರುವ ವೇತನ ದರವು ತುಂಬಾ ಕಡಿಮೆಯಾಗಿದ್ದು, ವೇತನವನ್ನು ಹೆಚ್ಚಿಸುವ ಬಗ್ಗೆ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸುವುದು ಸೂಕ್ತವೆಂದು ಅಭಿಪ್ರಾಯಪಟ್ಟರು. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಹಾಲಿ ನಿಗದಿಪಡಿಸಿರುವ ವೇತನವು ತುಂಬಾ ಕಡಿಮೆಯಾಗಿದ್ದು, ರೂ.125/-ರಿಂದ ದಿನಕ್ಕೆ ರೂ.200.00 ರಿಂದ ರೂ.250.00 ರವರೆಗೆ ಹೆಚ್ಚಿಸು ವಂತೆ ಕೋರಿ ರಾಜ್ಯ ಸರ್ಕಾರಕ್ಕೆ ಮತ್ತು ಕೇಂದ್ರಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯಲ್ಲಿ ಸರ್ವಾನುಮತ ದಿಂದ ನಿರ್ಣಯಿಸಲಾಯಿತು. |
| | ಜಿಲ್ಲೆಯಲ್ಲಿ ಸರ್ಕಾರಿ ಶಾಲೆಗಳನ್ನು ಮುಚ್ಚುತ್ತಿರುವ ಬಗ್ಗೆ ಮತ್ತು ಮಕ್ಕಳ ದಾಖಲಾತಿ ಪ್ರಮಾಣದಲ್ಲಿ ಗಣನೀಯವಾಗಿ ಇಳಿಕೆಯಾಗಿರುವ ವಿಷಯವನ್ನು ಚರ್ಚಿಸುವ ಬಗ್ಗೆ | ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್ ರವರು ಮಾತನಾಡುತ್ತಾ, ಜಿಲ್ಲೆಯಲ್ಲಿ 10ಕ್ಕಿಂತ ಮಕ್ಕಳು ಕಡಿಮೆಯಿರುವ ಶಾಲೆಗಳನ್ನು ಮುಚ್ಚುತ್ತಿದ್ದು, ಈ ಬಗ್ಗೆ ವಿವರ ನೀಡಬೇಕೆಂದು ಕೋರಿದರು.<br>ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆರವರು ಮಾತನಾಡುತ್ತಾ, ಜಿಲ್ಲೆಯಲ್ಲಿ ಸರ್ಕಾರಿ ಶಾಲೆಗಳಲ್ಲಿ 1 ರಿಂದ 10 ರವರೆಗೆ ಮಕ್ಕಳು ಇದ್ದಲ್ಲಿ ಅಂತಹ ಶಾಲೆಗಳ ಮಕ್ಕಳನ್ನು ಹತ್ತಿರವಿರುವ ಇನ್ನೊಂದು ಶಾಲೆಗೆ ಸೇರಿಸಲು ಕ್ರಮ ವಹಿಸಲಾಗುತ್ತಿದ್ದು, ಮಕ್ಕಳಿಗೆ ಶಾಲೆಗೆ ಹೋಗಿ ಬರಲು ವಾಹನ ಸೌಲಭ್ಯವನ್ನು ಒದಗಿಸಲು ಯೋಜನೆಯನ್ನು ರೂಪಿಸಲಾಗುತ್ತಿದೆ ಎಂದು ಸಭೆಗೆ ವಿವರ ನೀಡಿದರು.<br>ಮಾನ್ಯ ಸದಸ್ಯರಾದ ಶ್ರೀ ಈಶ್ವರಹಳ್ಳಿ ಲಕ್ಷ್ಮಣ್ ರವರು ಮಾತನಾಡುತ್ತಾ, ಸರ್ಕಾರಿ ಶಾಲೆಗಳ ಶಿಕ್ಷಕರಿಗೆ ತರಬೇತಿಯನ್ನು ನೀಡಿ ಶಿಕ್ಷಣ ಮಟ್ಟವನ್ನು ಉತ್ತಮ ಪಡಿಸುವುದು ಸೂಕ್ತವೆಂದು ಅಭಿಪ್ರಾಯಪಟ್ಟರು ಮತ್ತು ಶಿಕ್ಷಕರುಗಳನ್ನು ಸ್ವಂತ ತಾಲ್ಲೂಕಿನ ಶಾಲೆಗೆ ನೇಮಕ ಮಾಡದೇ ತಾಲ್ಲೂಕುಗಳನ್ನಾದರೂ ಬದಲಾವಣೆ ಮಾಡಿದಲ್ಲಿ ಶಿಕ್ಷಣವನ್ನು ಉತ್ತಮ ಪಡಿಸಲು ಅನುಕೂಲವಾಗುತ್ತದೆ ಎಂದು ಅಭಿಪ್ರಾಯಪಟ್ಟರು.<br>ಮಾನ್ಯ ಸದಸ್ಯರಾದ ಶ್ರೀ ಹುಚ್ಚೇಗೌಡರವರು ಮಾತನಾಡುತ್ತಾ, ಅರಸೀಕೆರೆ ತಾಲ್ಲೂಕು ಬನ್ನಿ ಮರದ ಹಟ್ಟಿಯಲ್ಲಿ ಯಾವುದೇ ಶಾಲೆಯಿರುವುದಿಲ್ಲ. ಈ ಬಗ್ಗೆ ಕ್ಷೇತ್ರ ಶಿಕ್ಷಣಾಧಿಕಾರಿಯವರು ಗಮನಕ್ಕೆ ಹಲವಾರು ಬಾರಿ ತಂದಿದ್ದರೂ ಸಹ ಇಲ್ಲಿಯವರೆಗೆ ಯಾವುದೇ ಕ್ರಮ | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಆನೆ ಹಾವಳಿಯಿರುವ ಪ್ರದೇಶ ಗಳಲ್ಲಿನ ಮಕ್ಕಳು ಶಾಲೆಗೆ ಬಂದು ವ್ಯಾಸಂಗ ಮಾಡಲು ಅನುಕೂಲ ವಾಗುವಂತೆ ಬಸ್ ಸೌಕರ್ಯವನ್ನು ಒದಗಿಸುವ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆ ಯನ್ನು ಸಲ್ಲಿಸಲು ಸಭೆಯಲ್ಲಿ ಸರ್ವಾನು ಮತದಿಂದ ನಿರ್ಣಯಿಸಲಾಯಿತು. |

| | | |
|---|---|---|
| | ವಹಿಸಿರುವುದಿಲ್ಲ. ಸದರಿ ಗ್ರಾಮದಲ್ಲಿ ಶಾಲೆಗೆ ಸಾಕಷ್ಟು ಮಕ್ಕಳು ಲಭ್ಯವಿದ್ದು, ಅವರು ಹಾಲಿ 2 ಕಿ.ಮೀ ದೂರ ನಡೆದು ಶಾಲೆಗೆ ಹೋಗಿಬರುತ್ತಿದ್ದಾರೆ. ಆದ್ದರಿಂದ, ಬನ್ನಿಮರದ ಹಟ್ಟಿಗೆ ಸರ್ಕಾರಿ ಶಾಲೆಯನ್ನು ಮಂಜೂರು ಮಾಡುವ ಬಗ್ಗೆ ಕ್ರಮ ವಹಿಸಬೇಕೆಂದು ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆರವರಿಗೆ ಕೋರಿದರು.<br>ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆರವರು ಮಾತನಾಡುತ್ತಾ, ಕ್ಷೇತ್ರ ಶಿಕ್ಷಣಾಧಿಕಾರಿ, ಅರಸೀಕೆರೆ ಇವರಿಂದ ಸಮಗ್ರ ವರದಿಯನ್ನು ಪಡೆದು ಸೂಕ್ತ ಕ್ರಮ ವಹಿಸಲಾಗುವುದು ಎಂದು ತಿಳಿಸಿದರು.<br>ಆನೆ ಹಾವಳಿಯಿರುವ ಪ್ರದೇಶಗಳಲ್ಲಿ ಮಕ್ಕಳು ಶಾಲೆಗೆ ಬಂದು ವ್ಯಾಸಂಗ ಮಾಡಲು ಅನುಕೂಲವಾಗುವಂತೆ ಬಸ್ ಸೌಕರ್ಯ ಒದಗಿಸುವ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯಲ್ಲಿ ಒಪ್ಪಿಗೆ ನೀಡಿತು. | |
| ಕೃಷಿ ಭೂಮಿಯನ್ನು ಅನ್ಯಸಂಕ್ರಮಣ ಮಾಡುವಾಗ ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿ ಮಧ್ಯ ರಸ್ತೆಯಿಂದ ಭೂಮಿಯನ್ನು ತೆಗೆಯುವಾಗ ಗ್ರಾಮ ಪಂಚಾಯಿತಿ ಮತ್ತು ಪುರಸಭೆ ವ್ಯಾಪ್ತಿಯಲ್ಲಿ ಬಹಳ ತಾರತಮ್ಯವಿರುವ ಬಗ್ಗೆ | ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್ ರವರು ಮಾತನಾಡುತ್ತಾ, ಕೃಷಿ ಭೂಮಿಯನ್ನು ಕೃಷಿಯೇತರ ಚಟುವಟಿಕೆಗಳಿಗೆ ಬದಲಾವಣೆ ಮಾಡುವಾಗ, ರಾಜ್ಯ ಹೆದ್ದಾರಿ ಮತ್ತು ರಾಷ್ಟ್ರೀಯ ಹೆದ್ದಾರಿ ಮಧ್ಯ ರಸ್ತೆಯಿಂದ ಮಾರ್ಜಿನ್ ಕಳೆಯುತ್ತಿದ್ದು, ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ 132 ಅಡಿಯಂತೆ ಮತ್ತು ಪುರಸಭೆ ವ್ಯಾಪ್ತಿಯಲ್ಲಿ ಕೇವಲ 75 ಅಡಿ ಮಾತ್ರ ಮಾರ್ಜಿನ ಕಳೆಯುತ್ತಿದ್ದು, ಯಾವ ಮಾನದಂಡವನ್ನು ಉಪಯೋಗಿಸಿ ಈ ರೀತಿ ಅಳತೆ ಮಾಡುತ್ತಿದ್ದಾರೆ ಎಂಬ ಬಗ್ಗೆ ಮಾಹಿತಿಯನ್ನು ನೀಡುವಂತೆ ಕೋರಿದರು.<br>ಸಹಾಯಕ ಅಭಿಯಂತರರು ಸರ್ಕಾರದ ಮಾರ್ಗಸೂಚಿಗಳ ಪ್ರಕಾರ ಭೂಮಿಯ ದರವನ್ನು ಪರಿಗಣಿಸಿ ಗ್ರಾಮ ಪಂಚಾಯಿತಿ ಮತ್ತು ಪುರಸಭೆ ವ್ಯಾಪ್ತಿಯಲ್ಲಿ ಮಾರ್ಜಿನ್ ಕಳೆಯುತ್ತಿದ್ದಾರೆಂದು ಸಭೆಗೆ ಮಾಹಿತಿ ನೀಡಿದರು. | |
| **ಅಧ್ಯಕ್ಷರ ಅಪ್ಪಣೆ ಮೇರೆಗೆ ಇತರೆ ವಿಷಯಗಳು** | | |
| ಡಾ: ಮಂಜುನಾಥ್, ಜಯದೇವ ಹೃದ್ರೋಗ ಸಂಸ್ಥೆ, ಬೆಂಗಳೂರು ಇವರನ್ನು ಸನ್ಮಾನಿಸುವ ಬಗ್ಗೆ | ಮಾನ್ಯ ಸದಸ್ಯರಾದ ಶ್ರೀ ದೇವೇಗೌಡ ಉರುಫ್ ಪಾಪಣ್ಣಿ ರವರು ಮಾತನಾಡುತ್ತಾ, ಹಾಸನ ನಗರದಲ್ಲಿ ವಿವಿಧ ಸಾರ್ವಜನಿಕ ಸಂಘ ಸಂಸ್ಥೆಗಳ ವತಿಯಿಂದ ಡಾ: ಸಿ.ಎನ್.ಮಂಜುನಾಥ್, ನಿರ್ದೇಶಕರು, ಜಯದೇವ ಹೃದ್ರೋಗ ಸಂಸ್ಥೆ, ಬೆಂಗಳೂರು ಇವರನ್ನು ಸನ್ಮಾನಿಸಲಾಗುತ್ತಿದ್ದು, ಜಿಲ್ಲಾ ಪಂಚಾಯಿತಿ ವತಿಯಿಂದಲೂ ಸಹ ಸದರಿಯವರನ್ನು ಅಭಿನಂದಿಸಲು ಸೂಕ್ತವೆಂದು ಅಭಿಪ್ರಾಯಪಟ್ಟು, ಇದಕ್ಕೆ ಸೂಕ್ತ ಕ್ರಮ ವಹಿಸಬೇಕೆಂದು ಕೋರಿದರು. | ಸಭೆಯಲ್ಲಿ ಚರ್ಚಿಸಿದಂತೆ, ಡಾ: ಸಿ.ಎನ್. ಮಂಜುನಾಥ್, ನಿರ್ದೇಶಕರು, ಜಯದೇವ ಹೃದ್ರೋಗ ಸಂಸ್ಥೆ, ಬೆಂಗಳೂರು ಇವರನ್ನು ಜಿಲ್ಲಾ ಪಂಚಾಯಿತಿ ವತಿಯಿಂದ ಅಭಿನಂದಿಸಲು ಸಭೆಯಲ್ಲಿ ಸರ್ವಾನುಮತ ದಿಂದ ನಿರ್ಣಯಿಸ ಲಾಯಿತು. |

| | | | |
|---|---|---|---|
| | ಜಿಲ್ಲಾ ಪಂಚಾಯಿತಿ ವತಿಯಿಂದ ಅನುಷ್ಠಾನ ಮಾಡುವ ಕೇಂದ್ರ ಪುರಸ್ಕೃತ ಯೋಜನೆಗಳ ಸಾಕ್ಷ್ಯಚಿತ್ರವನ್ನು ನಿರ್ಮಿಸುವ ಬಗ್ಗೆ. | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಜಿಲ್ಲಾ ಪಂಚಾಯಿತಿ ವ್ಯಾಪ್ತಿಯಲ್ಲಿ ಅನುಷ್ಠಾನ ಮಾಡುವ ವಿವಿಧ ಕೇಂದ್ರ ಪುರಸ್ಕೃತ ಯೋಜನೆಗಳಾದ , ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ/ ಸಂಪೂರ್ಣ ಸ್ವಚ್ಛತಾ ಆಂದೋಲನ/ ಸಂಪೂರ್ಣ ಗ್ರಾಮ ಸ್ವರೋಜ್ಗಾರ್ ಯೋಜನೆ/ ವಸತಿ ಯೋಜನೆ ಮತ್ತು ಗ್ರಾಮೀಣ ಕುಡಿಯುವ ನೀರು ಸರಬರಾಜು ಮುಂತಾದ ಯೋಜನೆಗಳಿಗೆ ಸಂಬಂಧಿಸಿದಂತೆ ಸಾಕ್ಷ್ಯ ಚಿತ್ರವನ್ನು ಸಿದ್ಧಪಡಿಸಿ ಸಲ್ಲಿಸುವಂತೆ ಕೇಂದ್ರ ಸರ್ಕಾರದಿಂದ ನಿರ್ದೇಶನವಿರುತ್ತದೆ. ಆದ್ದರಿಂದ, ಬೇರೆ ಬೇರೆ ಯೋಜನೆಗಳಿಗೆ ಪ್ರತ್ಯೇಕವಾಗಿ ಸಾಕ್ಷ್ಯ ಚಿತ್ರವನ್ನು ಸರ್ಕಾರಿ ಸಂಸ್ಥೆಯಾದ ಮಾರ್ಕೆಟಿಂಗ್ ಕನ್ಸಲ್ಟೆನ್ಸಿ ಏಜನ್ಸಿ ಬೆಂಗಳೂರು ಇವರಿಂದ ಸಿದ್ಧಪಡಿಸಲು ಸಭೆಯಲ್ಲಿ ಅನುಮೋದನೆ ನೀಡಬೇಕೆಂದು ಕೋರಿದರು. | ಸಭೆಯಲ್ಲಿ ಚರ್ಚಿಸಿದಂತೆ, ಜಿಲ್ಲಾ ಪಂಚಾಯಿತಿ ವ್ಯಾಪ್ತಿಯಲ್ಲಿ ಅನುಷ್ಠಾನ ಮಾಡುವ ವಿವಿಧ ಕೇಂದ್ರ ಪುರಸ್ಕೃತ ಯೋಜನೆಗಳಾದ , ಮಹಾತ್ಮ ಗಾಂಧಿ ರಾಷ್ಟ್ರೀ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ/ ಸಂಪೂರ್ಣ ಸ್ವಚ್ಛತಾ ಆಂದೋಲನ/ ಸಂಪೂರ್ಣ ಗ್ರಾಮ ಸ್ವರೋಜ್ಗಾರ್ ಯೋಜನೆ/ ವಸತಿ ಯೋಜನೆ ಮತ್ತು ಗ್ರಾಮೀಣ ಕುಡಿಯುವ ನೀರು ಸರಬರಾಜು ಮುಂತಾದ ಯೋಜನೆಗಳಿಗೆ ಸಂಬಂಧಿಸಿದಂತೆ ಪ್ರತ್ಯೇಕವಾಗಿ ಸಾಕ್ಷ್ಯ ಚಿತ್ರಗಳನ್ನು ಸರ್ಕಾರಿ ಸಂಸ್ಥೆಯಾದ ಮಾರ್ಕೆಟಿಂಗ್ ಕನ್ಸಲ್ಟೆನ್ಸಿ ಏಜನ್ಸಿ, ಬೆಂಗಳೂರು ಇವರಿಂದ ಸಿದ್ಧಪಡಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |
| | ತಾಲ್ಲೂಕು ಮಟ್ಟದ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಧನಸಹಾಯ ನೀಡುವ ಕುರಿತು. | ಟಿಪ್ಪಣಿ ಸಂಖ್ಯೆ: ಜಿಪಂಹಾ/ಆ(8) ವಂತಿಕೆ 159/2011-12 ದಿನಾಂಕ: 03-11-2011ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ದಿನಾಂಕ: 11-11-2011 ಮತ್ತು 12-11-2011ರಂದು ಅರಕಲಗೂಡು ತಾಲ್ಲೂಕಿನಲ್ಲಿ ತಾಲ್ಲೂಕು ಮಟ್ಟದ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಏರ್ಪಡಿಸಿದ್ದು, ಸದರಿ ಸಮ್ಮೇಳನಕ್ಕೆ ಜಿಲ್ಲಾ ಪಂಚಾಯಿತಿಯಿಂದ ಧನಸಹಾಯವನ್ನು ನೀಡುವಂತೆ ಮಾನ್ಯ ಸದಸ್ಯರಾದ ಶ್ರೀ ವಿ.ಎ.ನಂಜುಂಡಸ್ವಾಮಿರವರು ಮನವಿ ಸಲ್ಲಿಸಿದ್ದು, ವಿಷಯವನ್ನು ಸಭೆಯ ನಿರ್ಣಯಕ್ಕೆ ಮಂಡಿಸಿದೆ | ಸಭೆಯಲ್ಲಿ ಚರ್ಚಿಸಿದಂತೆ, ದಿನಾಂಕ: 11-11-2011 ಮತ್ತು 12-11-2011ರಂದು ಅರಕಲಗೂಡು ತಾಲ್ಲೂಕಿನಲ್ಲಿ ನಡೆಯುವ ತಾಲ್ಲೂಕು ಮಟ್ಟದ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಜಿಲ್ಲಾ ಪಂಚಾಯಿತಿ ವತಿಯಿಂದ ರೂ. 10000/-(ರೂಪಾಯಿ ಹತ್ತು ಸಾವಿರ ಮಾತ್ರ)ಗಳ |

| | | |
|---|---|---|
| | | ಧನಸಹಾಯವನ್ನು ನೀಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |
| ಬೇಲೂರು ತಾಲ್ಲೂಕಿನಲ್ಲಿ ನಡೆಯುವ ತಾಲ್ಲೂಕು ಮಟ್ಟದ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಧನ ಸಹಾಯ ನೀಡುವ ಬಗ್ಗೆ. | ಕಾರ್ಯದರ್ಶಿ, ಕನ್ನಡ ಸಾಹಿತ್ಯ ಪರಿಷತ್, ಅರೇಹಳ್ಳಿ ಇವರು ಮನವಿಯನ್ನು ಸಲ್ಲಿಸಿ ಬೇಲೂರು ತಾಲ್ಲೂಕಿನಲ್ಲಿ 4ನೇ ಕನ್ನಡ ಸಾಹಿತ್ಯ ಸಮ್ಮೇಳನವನ್ನು ದಿನಾಂಕ: 25-11-2011ರಂದು ನಡೆಸಲು ಉದ್ದೇಶಿದ್ದು, ಜಿಲ್ಲಾ ಪಂಚಾಯಿತಿ ವತಿಯಿಂದ ಧನಸಹಾಯವನ್ನು ನೀಡಬೇಕೆಂದು ಕೋರುತ್ತಾರೆ. | ಸಭೆಯಲ್ಲಿ ಚರ್ಚಿಸಿದಂತೆ, ಬೇಲೂರು ತಾಲ್ಲೂಕು, ಅರೇಹಳ್ಳಿಯಲ್ಲಿ ದಿನಾಂಕ; 25-11-2011ರಂದು ನಡೆಯುವ ತಾಲ್ಲೂಕು ಮಟ್ಟದ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಜಿಲ್ಲಾ ಪಂಚಾಯಿತಿ ವತಿಯಿಂದ ರೂ.10000/-(ರೂಪಾಯಿ ಹತ್ತು ಸಾವಿರ ಮಾತ್ರ)ಗಳ ಧನಸಹಾಯವನ್ನು ನೀಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |
| ಹೊಸದಾಗಿ ಹಾಲು ಉತ್ಪಾದಕರ ಸಹಕಾರ ಸಂಘವನ್ನು ಮಂಜೂರು ಮಾಡುವ ಬಗ್ಗೆ. | ಮಾನ್ಯ ಸದಸ್ಯರಾದ ಶ್ರೀ ಅಮಿತ್ ಕುಮಾರ್ ಶೆಟ್ಟಿರವರು ಮಾತನಾಡುತ್ತಾ, ಬೆಳಗೋಡು ಜಿಲ್ಲಾ ಪಂಚಾಯಿತಿ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಸುಂಡೇಕೆರೆ, ಉದೇವಾರ, ಕಲ್ಲಳ್ಳಿ, ಹೆಬ್ಬನಹಳ್ಳಿ, ಮೂಗಲಿ ಗ್ರಾಮಗಳ ವ್ಯಾಪ್ತಿಯಲ್ಲಿ ಹೊಸದಾಗಿ ಹಾಲು ಉತ್ಪಾದಕರ ಸಂಘವನ್ನು ಮಂಜೂರು ಮಾಡಲು ಕೃಷಿ ಮತ್ತು ಕೈಗಾರಿಕಾ ಸ್ಥಾಯಿ ಸಮಿತಿ ಸಭೆಯಲ್ಲಿ ನಿರ್ಣಯಿಸಲಾಗಿದ್ದು, (ಮಾರ್ಗ: ಸುಂಡೇಕೆರೆ, ಉದೇವಾರ, ಕಲ್ಲಳ್ಳಿ, ಹೆಬ್ಬನಹಳ್ಳಿ, ಮೂಗಲಿ ಬೆಳಗೋಡು, ಪಾಳ್ಯ, ಹಾಸನ) ಅರೇಹಳ್ಳಿ ಗ್ರಾಮಕ್ಕೂ ವಿಸ್ತರಿಸಬೇಕೆಂದು ಕೋರಿದರು. | ಸಭೆಯಲ್ಲಿ ಚರ್ಚಿಸಿದಂತೆ, ಮಾನ್ಯ ಸದಸ್ಯರ ಕೋರಿಕೆಯಂತೆ, ಬೆಳಗೋಡು ಜಿಲ್ಲಾ ಪಂಚಾಯಿತಿ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಸುಂಡೇಕೆರೆ, ಉದೇವಾರ, ಕಲ್ಲಳ್ಳಿ, ಹೆಬ್ಬನಹಳ್ಳಿ, ಮೂಗಲಿ ಗ್ರಾಮಗಳ ವ್ಯಾಪ್ತಿಯಲ್ಲಿ ಹೊಸದಾಗಿ ಹಾಲು ಉತ್ಪಾದಕರ ಸಂಘವನ್ನು ಮಂಜೂರು ಮಾಡಲು ಕೃಷಿ ಮತ್ತು ಕೈಗಾರಿಕಾ ಸ್ಥಾಯಿ ಸಮಿತಿ ಸಭೆಯಲ್ಲಿ ನಿರ್ಣಯಿಸಲಾಗಿದ್ದು, (ಮಾರ್ಗ: ಸುಂಡೇಕೆರೆ, ಉದೇವಾರ, ಕಲ್ಲಳ್ಳಿ, ಹೆಬ್ಬನಹಳ್ಳಿ, ಮೂಗಲಿ ಬೆಳಗೋಡು, ಪಾಳ್ಯ, ಹಾಸನ) |

| | | | |
|---|---|---|---|
| | | | ಜೊತೆಗೆ ಅರೇಹಳ್ಳಿ ಗ್ರಾ ವಿಸ್ತರಿಸುವಂತೆ ಹಾಸನ ಒಕ್ಕೂಟರವರಿಗೆ ಪ್ರಸ್ತಾವನೆ ಸಲ್ಲಿಸಲು ಸಭೆಯಲ್ಲಿ ಸವ ಮತದಿಂದ ನಿರ್ಣಯಿಸ ಲಾಯಿ |
| 6 | ರಾಜ್ಯಮಟ್ಟದ ಅಥ್ಲೆಟಿಕ್ಸ್ ನಲ್ಲಿ ಭಾಗವಹಿಸಲು ಧನ ಸಹಾಯ ನೀಡುವಂತೆ ಕೋರಿದರು. | ಟಿಪ್ಪಣಿ ಸಂ: ಜಿಪಂಹಾ/ಆ(8)ವಂತಿಕೆ143/2011-12 ದಿನಾಂಕ: 14-10-2011ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಕುಮಾರಿ ನೇತ್ರಾವತಿ ವಿ.ಎ ಇವರು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಚಿಕ್ಕ ಅರಕಲಗೂಡು ಕಾಲೋನಿ, ಇಲ್ಲಿ 7ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿದ್ದು, ತಾಲ್ಲೂಕು ಮಟ್ಟದ ಮತ್ತು ಜಿಲ್ಲಾ ಮಟ್ಟದ ಅಥ್ಲೆಟಿಕ್ಸ ವಿಭಾಗದಲ್ಲಿ 400 ಮೀಟರ್ ಓಟದಲ್ಲಿ ದ್ವಿತೀಯ ಸ್ಥಾನ ಪಡೆದಿದ್ದು, ರಾಜ್ಯಮಟ್ಟಕ್ಕೆ ಆಯ್ಕೆಯಾಗಿರುತ್ತಾರೆ. ಆದ್ದರಿಂದ, ಸದರಿ ವಿದ್ಯಾರ್ಥಿಯು ರಾಜ್ಯಮಟ್ಟದ ಅಥ್ಲೆಟಿಕ್ಸ್ ನಲ್ಲಿ ಭಾಗವಹಿಸಲು ಅನುಕೂಲವಾಗುವಂತೆ ಜಿಲ್ಲಾ ಪಂಚಾಯಿತಿ ವತಿಯಿಂದ ರೂ.10000/-ಗಳ ಧನ ಸಹಾಯವನ್ನು ನೀಡುವಂತೆ ಮಾನ್ಯ ಸದಸ್ಯರಾದ ಶ್ರೀ ವಿ.ಎ.ನಂಜುಂಡಸ್ವಾಮಿರವರು ಕೋರಿರುತ್ತಾರೆ. | ಸಭೆಯಲ್ಲಿ ಚರ್ಚಿಸಿದಂತೆ, ಕು ನೇತ್ರಾವತಿ ವಿ.ಎ ಇವರು ಸ ಹಿರಿಯ ಪ್ರಾಥಮಿಕ ಶಾಲೆ, ಅರಕಲಗೂಡು ಕಾಲೋನಿ ರಾಜ್ಯ ಮಟ್ಟದ ಅಥ್ಲೆಟಿಕ್ಸ್ ಭಾಗವಹಿಸಲು ಅನುಕೂಲವಾಗ ಜಿಲ್ಲಾ ಪಂಚಾಯಿತಿ ವತಿ ರೂ.10000/-(ರೂಪಾಯಿ ಸಾವಿರ ಮಾತ್ರ)ಗಳ ಧನಸಹಾಯ ನೀಡಲು ಸಭೆಯಲ್ಲಿ ಸರ್ವಾನ ದಿಂದ ನಿರ್ಣಯಿಸಲಾಯಿತು. |
| 7 | ಗೊರೂರು ಸಸ್ಯಕ್ಷೇತ್ರಕ್ಕೆ ಸಂಬಂಧಿಸಿದಂತೆ, | ಅರಕಲಗೂಡು ಸಾಮಾಜಿಕ ಅರಣ್ಯ ವಲಯವತಿಯಿಂದ 2009-10ನೇ ಸಾಲಿನಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ಗೊರೂರು ಸಸ್ಯ ಕ್ಷೇತ್ರದಲ್ಲಿ 6,09,000 ಸಸಿಗಳನ್ನು ಬೆಳೆಸುವ ಗುರಿ ಇದ್ದುದರಿಂದ, ಹಾಲಿ ಇದ್ದ ಸಸ್ಯ ಕ್ಷೇತ್ರದಲ್ಲಿ ಸ್ಥಳಾವಕಾಶ ಕಡಿಮೆ ಇದ್ದ ಕಾರಣ, ಕಾರ್ಯಪಾಲಕ ಇಂಜಿನಿಯರ್ ರವರು ನೀರಾವರಿ ನಿಗಮ ನಿಯಮಿತ, ಹೇಮಾವತಿ ಅಣೆಕಟ್ಟು ವಿಭಾಗ, ಗೊರೂರು ರವರಿಗೆ ಪತ್ರ ವ್ಯವಹಾರ ನಡೆಸಿ ಗೊರೂರು ಅಣೆಕಟ್ಟು ಸಮೀಪದಲ್ಲಿ ಖಾಲಿ ಇರುವ ಪ್ರದೇಶದಲ್ಲಿ ಸಸ್ಯಕ್ಷೇತ್ರ ನಿರ್ಮಿಸಿಕೊಳ್ಳಲು ಮನವಿ ಮಾಡಿಕೊಳ್ಳಲಾಗಿ ಸದರಿಯವರು ಆ ವೇಳೆಯಲ್ಲಿ ಅನುಮತಿ ನೀಡಿದ್ದರು. ಆದ್ದರಿಂದ, ಎರಡು ವರ್ಷಗಳಿಂದ ಹಾಲಿ ಪ್ರದೇಶದಲ್ಲಿ ಸಸ್ಯ ಕ್ಷೇತ್ರವನ್ನು ಬೆಳೆಸುತ್ತಿದ್ದು, ಈಗ ಆ ಸ್ಥಳದಲ್ಲಿ ಬೃಂದಾವನ ನಿರ್ಮಿಸುವ ಉದ್ದೇಶವಿರುವುದರಿಂದ, ನಾವು ಸಸ್ಯ ಕ್ಷೇತ್ರ ಬೆಳೆಸುತ್ತಿರುವ ಸ್ಥಳವನ್ನು ಬಿಟ್ಟುಕೊಡುವಂತೆ ಕೇಳುತ್ತಿದ್ದಾರೆ. ಇಲ್ಲವಾದಲ್ಲಿ ಸದರಿ ಸ್ಥಳವನ್ನು ಭೋಗ್ಯಕ್ಕೆಂದು ನಿಗದಿಪಡಿಸಿ ಇಲ್ಲವೆ ಬಾಡಿಗೆಯನ್ನು ಪಾವತಿಸಬೇಕೆಂದು ತಿಳಿಸುತ್ತಿದ್ದಾರೆಂದು ವಲಯ ಅರಣ್ಯ ಸಂರಕ್ಷಣಾಧಿಕಾರಿಯವರು ಕೋರಿರುತ್ತಾರೆ. | ಸಭೆಯಲ್ಲಿ ಚರ್ಚಿಸಿದಂತೆ, ನೀ ನಿಗಮ ನಿಯಮಿತ, ಹೇವ ಅಣೆಕಟ್ಟು ವಿಭಾಗ, ಗೊರೂರು ವ್ಯಾಪ್ತಿಯಲ್ಲಿರುವ ಖಾಲಿ ಜ ಸರ್ಕಾರಿ ಜಾಗವಾಗಿದ್ದು, ಜಾಗವನ್ನು ಸಾಮಾಜಿಕ ವಲಯದ ವತಿಯಿಂದ ಕ್ಷೇತ್ರನಿರ್ವಹಣೆ ಮಾಡಲು ವಾಗಿ ಬಿಟ್ಟುಕೊಡುವಂತೆ ಕ |

| | | | |
|---|---|---|---|
| | | ಆದರೆ, ವಲಯ ಸಂರಕ್ಷಣಾಧಿಕಾರಿಯವರು ಸರ್ಕಾರಿ ಉದ್ದೇಶಕ್ಕಾಗಿ ಸದರಿ ಸ್ಥಳವನ್ನು ಉಪಯೋಗಿಸಿಕೊಂಡಿರುತ್ತಾರೆ. ಆದ್ದರಿಂದ, ಹಾಲಿ ಇರುವಂತೆಯೇ ವಲಯ ಸಸ್ಯ ಕ್ಷೇತ್ರವನ್ನು ನಿರ್ವಹಣೆ ಮಾಡಲು ಸದರಿ ಜಾಗವನ್ನು ಉಚಿತವಾಗಿ ನೀಡುವಂತೆ ಕಾರ್ಯಪಾಲಕ ಇಂಜಿನಿಯರ್ ರವರು ನೀರಾವರಿ ನಿಗಮ ನಿಯಮಿತ, ಹೇಮಾವತಿ ಅಣೆಕಟ್ಟು ವಿಭಾಗ, ಗೊರೂರುರವರಿಗೆ ಪ್ರಸ್ತಾವನೆಯನ್ನು ಸಲ್ಲಿಸುವುದು ಸೂಕ್ತವೆಂದು ಸದಸ್ಯರು ಅಭಿಪ್ರಾಯಪಟ್ಟರು. | ಪಾಲಕ ಇಂಜಿನಿಯರ್ ನೀರಾವರಿ ನಿಗಮ ನಿಯ ಹೇಮಾವತಿ ಅಣೆಕಟ್ಟು ವಿ ಗೊರೂರುರವರಿಗೆ ಪ್ರಸ್ತಾವನೆ ಸಲ್ಲಿಸಲು ಸಭೆಯಲ್ಲಿ ಸರ್ವಾನ ದಿಂದ ನಿರ್ಣಯಿಸಲಾಯಿತು. |
| 8 | ಖಾಲಿಯಿರುವ ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳ ಹುದ್ದೆಗಳನ್ನು ಪದೋನ್ನತಿ ಮೂಲಕ ಭರ್ತಿ ಮಾಡುವ ಬಗ್ಗೆ. | ಅಧ್ಯಕ್ಷರ ಅಪ್ಪಣೆ ಮೇರೆಗೆ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿಯ ಅಧ್ಯಕ್ಷರಾದ ಶ್ರೀ ಎಂ.ಕೆ.ದ್ಯಾವಯ್ಯರವರು ಮಾತನಾಡುತ್ತಾ, ಹಾಸನ ಜಿಲ್ಲೆಯಲ್ಲಿ ಎಷ್ಟು ಪಂಚಾಯತ್ ಅಭಿವೃದ್ಧಿ ಅಧಿಕಾರಿ ಹುದ್ದೆಗಳು ಮತ್ತು ಎಷ್ಟು ಕಾರ್ಯದರ್ಶಿಗಳ ಹುದ್ದೆಗಳು ಖಾಲಿಯಿರುತ್ತವೆ ಎಂಬ ಮಾಹಿತಿಯನ್ನು ಸಭೆಗೆ ನೀಡಬೇಕೆಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರನ್ನು ಕೋರಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಜಿಲ್ಲೆಯಲ್ಲಿ 88 ಪಿ.ಡಿ.ಓ ಹುದ್ದೆಗಳು ಮತ್ತು 66 ಕಾರ್ಯದರ್ಶಿಗಳ ಹುದ್ದೆಗಳು ಖಾಲಿಯಿರುತ್ತವೆ. ಅಲ್ಲದೆ, ಸುಮಾರು 18 ಗ್ರಾಮ ಪಂಚಾಯಿತಿಗಳಲ್ಲಿ ಪಿ.ಡಿ.ಓ ಹುದ್ದೆಗಳು ಮತ್ತು ಕಾರ್ಯದರ್ಶಿ ಹುದ್ದೆಗಳು ಎರಡೂ ಖಾಲಿಯಿರುತ್ತವೆ ಎಂದು ಸಭೆಗೆ ಮಾಹಿತಿ ನೀಡಿದರು.<br>ಶ್ರೀ ಎಂ.ಕೆ.ದ್ಯಾವಯ್ಯರವರು ಮುಂದುವರೆದು ಮಾತನಾಡುತ್ತಾ, ಇಷ್ಟೊಂದು ಬೃಹತ್ ಪ್ರಮಾಣದ ಹುದ್ದೆಗಳು ಖಾಲಿಯಿದ್ದಾಗ ಗ್ರಾಮ ಪಂಚಾಯಿತಿಗಳ ಆಡಳಿತವನ್ನು ಹೇಗೆ ನಡೆಸಲು ಸಾಧ್ಯ. ಪಿ.ಡಿ.ಓ ಮತ್ತು ಕಾರ್ಯದರ್ಶಿಗಳ ಹುದ್ದೆಗಳು ಖಾಲಿಯಿರುವ ಹಿನ್ನಲೆಯಲ್ಲಿ ಸಾರ್ವಜನಿಕರು ನಮಗೆ ಬಹಳಷ್ಟು ದೂರುಗಳನ್ನು ನೀಡಿರುತ್ತಾರೆ. ಅವರ ಭರ್ತಿಗೆ ನೀವು ಯಾವ ರೀತಿ ಕ್ರಮ ವಹಿಸುತ್ತೀರ ಎಂದು ಪ್ರಶ್ನಿಸಿದರು. ಅವರನ್ನು ಬೆಂಬಲಿಸಿ ಮಾನ್ಯ ಸದಸ್ಯರಾದ ಶ್ರೀ ಹುಚ್ಚೇಗೌಡರವರು ಮಾತನಾಡುತ್ತಾ, ಗ್ರಾಮ ಪಂಚಾಯಿತಿಗಳಲ್ಲಿ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಮತ್ತು ಕಾರ್ಯದರ್ಶಿಗಳು ಇಲ್ಲದೆ ಸಾರ್ವಜನಿಕರ ಕೆಲಸಗಳನ್ನು ಮಾಡಲು ಆಗುವುದಿಲ್ಲ. ನಾವು ಕೇವಲ ಸಭೆಗಳನ್ನು ಮಾಡಿದರೆ ಪ್ರಯೋಜನವಿಲ್ಲ. ಆದ್ದರಿಂದ, ಕಾರ್ಯದರ್ಶಿಗಳ ನೇಮಕಾತಿಗೆ ಕ್ರಮ ವಹಿಸಬೇಕೆಂದು ಆಗ್ರಹಿಸಿದರು.<br>ಮೇಲಿನ ಸದಸ್ಯರ ಅಭಿಪ್ರಾಯಗಳನ್ನು ಮಾನ್ಯ ಜಿಲ್ಲಾ ಪಂಚಾಯತ್ ಅಧ್ಯಕ್ಷರಾದ ಶ್ರೀಮತಿ ಸುಲೋಚನಾ ರಾಮಕೃಷ್ಣರವರು ಬೆಂಬಲಿಸಿ ಮಾತನಾಡುತ್ತಾ, ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ತುರ್ತು ಕ್ರಮ ವಹಿಸಬೇಕು, ಕಾರ್ಯದರ್ಶಿಗಳಿಲ್ಲದೆ ಜಿಲ್ಲೆಯಲ್ಲಿ ಅಭಿವೃದ್ಧಿ ಕುಂಠಿತವಾಗಿದೆ ಎಂದು ಸಭೆಯಲ್ಲಿ ತಿಳಿಸಿದರು. ಅಲ್ಲದೆ, ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಈ ಬಗ್ಗೆ ತುರ್ತು ಕ್ರಮ ವಹಿಸಿ ಗ್ರಾಮ ಪಂಚಾಯಿತಿಗಳ ಆಡಳಿತವನ್ನು ವ್ಯವಸ್ಥಿತಗೊಳಿಸಬೇಕೆಂದು ಸಭೆಯಲ್ಲಿ ಒಕ್ಕೊರಲಿನಿಂದ ಆಗ್ರಹಪಡಿಸಿದರು. | ಸಭೆಯಲ್ಲಿ ವಿಷಯದ ಬಗ್ಗೆ ವಿವ ಚರ್ಚಿಸಲಾಯಿತು.<br>ಹಾಸನ ಜಿಲ್ಲೆಯಲ್ಲಿ ಖಾಲಿ ಗ್ರಾಮ ಪಂಚಾಯಿತಿಗಳಿಗೆ ಹುದ್ದೆಗಳನ್ನು ಸರ್ಕಾರದ ಹಂ ನೇಮಕಾತಿ ಆಗಬೇಕಾಗಿರುವು ಜಿಲ್ಲಾ ಪಂಚಾಯಿತಿ ಹಂತದಲ್ಲಿ ಕೈಗೊಳ್ಳಲು ಬರುವುದಿಲ್ಲ. ಖಾಲಿಯಿರುವ ಗ್ರೇಡ್ -2 ಕಾಯ ಗಳ ಹುದ್ದೆಗಳಿಗೆ ಬಿಲ್ ಹುದ್ದೆಗಳಲ್ಲಿ ಸತತವಾಗಿ 18 ರಿಂ ವರ್ಷದ ವರೆಗೆ ಕಾರ್ಯನಿರ್ವಹಿ ಬಂದಿರುವ ಬಿಲ್ ಕಲೆಕ್ಟರ್ ಗಳನ್ನು -2 ಕಾರ್ಯದರ್ಶಿ ಹುದ್ದೆಗಳಿಗೆ ಪದೆ ಮೂಲಕ ಭರ್ತಿ ಮಾಡಲು ತುರ್ತು ವಹಿಸಲು ಮುಖ್ಯ ಕಾರ್ಯ ನಿ ಅಧಿಕಾರಿಯವರಿಗೆ ಅಧಿಕಾರ ಸಭೆಯಲ್ಲಿ ಸರ್ವಾನುಮ ನಿರ್ಣಯಿಸಲಾಯಿತು. |

| | | | |
|---|---|---|---|
| 9 | ಪಶ್ಚಿಮ ಘಟ್ಟ ಅಭಿವೃದ್ಧಿ ಯೋಜನೆಯಡಿ ಹೆಚ್ಚುವರಿ ಪ್ರಸ್ತಾವನೆಯನ್ನು ಸಲ್ಲಿಸುವ ಬಗ್ಗೆ. | ಮಾನ್ಯ ಸದಸ್ಯರಾದ ಶ್ರೀ ಅಮಿತ್ ಕುಮಾರ್ ಶೆಟ್ಟಿರವರು ಮಾತನಾಡುತ್ತಾ, ಬೇಲೂರು ತಾಲ್ಲೂಕಿನಲ್ಲಿ ಬಹಳಷ್ಟು ಕಡೆ ಕಾಲು ಸೇತುವೆಗಳಿಲ್ಲದೆ ಜನರು ಮಳೆಗಾಲದಲ್ಲಿ ಓಡಾಡಲು ತಂಬಾ ತೊಂದರೆಯಾಗುತ್ತದೆ. ಆದ್ದರಿಂದ, ಹೆಚ್ಚುವರಿಯಾಗಿ ಕಾಲು ಸೇತುವೆಗಳನ್ನು ನಿರ್ಮಾಣ ಮಾಡಲು ಕ್ರಮ ವಹಿಸಬೇಕೆಂದು ಒತ್ತಾಯಿಸಿದರು. ಅದೇ ರೀತಿ ಕಾಲು ಸೇತುವೆಗಳನ್ನು ಮಳೆ ಹೆಚ್ಚಾಗಿರುವ ಸಕಲೇಶಪುರ ತಾ: ಮತ್ತು ಆಲೂರು ತಾಲ್ಲೂಕುಗಳಲ್ಲಿಯೂ ಸಹ ನಿರ್ಮಾಣ ಮಾಡುವ ಅಗತ್ಯವಿದೆಯೆಂದು ಸದರಿ ತಾಲ್ಲೂಕುಗಳ ಸದಸ್ಯರು ಒತ್ತಾಯ ಮಾಡಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, 2011-12ನೇ ಸಾಲಿಗೆ ಸರ್ಕಾರದಿಂದ ರೂ.243.82ಲಕ್ಷಗಳ ಆರ್ಥಿಕ ಗುರಿ ನಿಗದಿಯಾಗಿದ್ದು, ಅದಕ್ಕೆ ಕ್ರಿಯಾ ಯೋಜನೆಯನ್ನು ತಯಾರಿಸಿ ಈಗಾಗಲೇ ಸರ್ಕಾರಕ್ಕೆ ಸಲ್ಲಿಸಲಾಗಿದೆ. ಕಡಿಮೆ ಅನುದಾನ ಬಂದಿದ್ದರಿಂದ, ಸದಸ್ಯರು ತಿಳಿಸಿದಂತೆ, ಎಲ್ಲಾ ಕಡೆ ಕಾಲು ಸೇತುವೆ ಮಾಡಲು ಸಾಧ್ಯವಾಗಿರುವುದಿಲ್ಲ. ಆದರೆ, ದಿನಾಂಕ: 05-11-2011ರಂದು ಸರ್ಕಾರದಲ್ಲಿ ನಡೆದ ಪಶ್ಚಿಮ ಘಟ್ಟ ಅಭಿವೃದ್ಧಿ ಯೋಜನೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ನಿರ್ದೇಶಕರು ಸೂಚಿಸಿದಂತೆ, ಅಗತ್ಯವಿದ್ದಲ್ಲಿ ಹೆಚ್ಚುವರಿ ಕ್ರಿಯಾ ಯೋಜನೆಯನ್ನು ಸರ್ಕಾರಕ್ಕೆ ಸಲ್ಲಿಸಬಹುದಾಗಿದೆ. ಆದ್ದರಿಂದ, ಸದಸ್ಯರು ಅಗತ್ಯವಿರುವ ಕಾಲು ಸೇತುವೆಗಳ ಪಟ್ಟಿಗಳನ್ನು ನೀಡಬಹುದೆಂದು ಸೂಚಿಸಿದರು. | ಸುದೀರ್ಘವಾಗಿ ಚರ್ಚಿಸಲಾಯಿತು<br>ಪಶ್ಚಿಮ ಘಟ್ಟ ಅ<br>ಯೋಜನೆಯ ವ್ಯಾಪ್ತಿಯಲ್ಲಿ<br>ತಾಲ್ಲೂಕುಗಳಾದ ಹಾಸನ, ಬೇ<br>ಆಲೂರು ಮತ್ತು ಸಕಲೇ<br>ತಾಲ್ಲೂಕುಗಳ ಜಿಲ್ಲಾ ಪಂಚಾ<br>ಸದಸ್ಯರು ತಮ್ಮ ಕ್ಷೇತ್ರ ವ್ಯಾಪ್ತಿ<br>ಅಗತ್ಯವಿರುವ ಕಡೆಯ ಕಾಮಗಾ<br>ಪಟ್ಟಿಗಳನ್ನು ಸಲ್ಲಿಸಲು ಸ<br>ಸೂಚಿಸಲಾಯಿತು ಹಾಗೂ<br>ಮುಖ್ಯ ಕಾರ್ಯನಿರ್ವಾಹಕ ಅ<br>ಯವರು ಎಲ್ಲಾ ಸ<br>ಪ್ರಸ್ತಾವನೆಗಳನ್ನು ಕ್ರೋಢೀ<br>ಹೆಚ್ಚುವರಿ ಕ್ರಿಯಾ ಯೋಜನೆ<br>ಸರ್ಕಾರಕ್ಕೆ ಸಲ್ಲಿಸಲು ಸ<br>ಸೂಚಿಸಿ ಸರ್ವಾನುಮತ<br>ನಿರ್ಣಯಿಸಲಾಯಿತು. |
| | ಸಭೆಯಲ್ಲಿ ಇನ್ನಾವುದೇ ವಿಷಯಗಳು ಚರ್ಚೆಗೆ ಬಾರದ ಹಿನ್ನೆಲೆಯಲ್ಲಿ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು. | | |

Sulochana

(ಸುಲೋಚನಾ ರಾಮಕೃಷ್ಣ)

ಅಧ್ಯಕ್ಷರು,

ಜಿಲ್ಲಾ ಪಂಚಾಯಿತಿ, ಹಾಸನ.